ಜೆಎಸ್‌ಎಸ್ ಮಹಾವಿದ್ಯಾಪೀಠ, ಮೈಸೂರು

JSS MAHAVIDYAPEETHA, MYSURU

# ಜೆಎಸ್‌ಎಸ್ ವಾರ್ತಾಪತ್ರ

## ಮಾಸಪತ್ರಿಕೆ

# JSS VARTHAPATHRA

*Monthly Magazine*

ಸಂಪುಟ 8 ಸಂಚಿಕೆ 4 ಏಪ್ರಿಲ್ 2023




ಮೈಸೂರಿನ ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯದ ಐದನೆಯ ಘಟಿಕೋತ್ಸವವು ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ನೆರವೇರಿತು. ಸದ್ಗುರು ಶ್ರೀ ಜಗ್ಗಿ ವಾಸುದೇವ್‌ರವರು ಘಟಿಕೋತ್ಸವ ಭಾಷಣ ಮಾಡಿದರು. ಪ್ರಶಸ್ತಿವಿಜೇತ ಪದವೀಧರರುಗಳೊಂದಿಗೆ ಪ್ರೊ. ಪಿ. ಮಲ್ಲು, ಪ್ರೊ. ಬಿ. ಮನೋಜ್ ಕುಮಾರ್, ಡಾ. ಪಿ. ನಾಗೇಶ್, ಪ್ರೊ. ಎಸ್.ಎ. ಧನರಾಜ್, ಡಾ. ಎಚ್.ಎಸ್. ಮಂಜುನಾಥ್ ಭಾರ್ಗವ್, ಪ್ರೊ. ಎ.ಎನ್. ಸಂತೋಷ್ ಕುಮಾರ್, ಡಾ. ಸಿ.ಜಿ. ಬೆಟಸೂರಮಠ, ಪ್ರೊ. ಎಸ್.ಎ. ಕೋರಿ, ಪ್ರೊ. ಪಿ. ನಂಜುಂಡಸ್ವಾಮಿ ಮತ್ತು ಪ್ರೊ. ಎಸ್.ಬಿ. ಕಿವಡೆಯವರುಗಳಿದ್ದಾರೆ (20 ಮಾರ್ಚ್ 2023)



ಶ್ರೀ ಸುತ್ತೂರು ಕ್ಷೇತ್ರದಲ್ಲಿ ವಸತಿ ಶಾಲೆಯ ವಿದ್ಯಾರ್ಥಿಗಳಿಗಾಗಿ 'ತನುಜಾ' ಚಲನಚಿತ್ರ ಪ್ರದರ್ಶನವನ್ನು ಪರಮಪೂಜ್ಯ ಜಗದ್ಗುರುಗಳವರ ಸಾನ್ನಿಧ್ಯದಲ್ಲಿ ಏರ್ಪಡಿಸಲಾಗಿತ್ತು. ನಾಲ್ಕು ಸಾವಿರಕ್ಕೂ ಹೆಚ್ಚು ಮಕ್ಕಳು, ವಿವಿಧ ಮಠಗಳ ಮಠಾಧಿಪತಿಗಳು, ಜೆಎಸ್‌ಎಸ್ ಸಂಸ್ಥೆಯ ಅಧಿಕಾರಿಗಳು, ಸಿಬ್ಬಂದಿವರ್ಗದವರು, ಚಿತ್ರತಂಡ ಹಾಗೂ ಸಾರ್ವಜನಿಕರು ಚಿತ್ರ ವೀಕ್ಷಿಸಿದರು (11 ಮಾರ್ಚ್ 2023)





ಮೈಸೂರಿನ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ 15ನೆಯ ಪದವೀಧರರ ದಿನಾಚರಣೆಯಲ್ಲಿ ಪ್ರೊ. ಬಿ.ವಿ. ಸಾಂಬಶಿವಯ್ಯ, ಡಾ. ಸಿ.ಜಿ. ಬೆಟಸೂರಮಠ, ಶ್ರೀಮತಿ ಸಿ. ಶಿಖಾ, ಪ್ರೊ. ಎಂ.ಪಿ. ವಿಜಯೇಂದ್ರ ಕುಮಾರ್, ಡಾ. ಬಿ. ಪ್ರಭುಸ್ವಾಮಿ ಮತ್ತು ಪ್ರಶಸ್ತಿವಿಜೇತ ಪದವೀಧರರುಗಳಿದ್ದಾರೆ (12 ಮಾರ್ಚ್ 2023)

## ಉದ್ಯೋಗಾವಕಾಶ ಸೃಷ್ಟಿಸುವುದು ಅಗತ್ಯ

ಕರ್ನಾಟಕ ಸೇರಿದಂತೆ ದೇಶದಲ್ಲಿ ಹೊರಬರುತ್ತಿರುವ ಇಂಜಿನಿಯರಿಂಗ್ ಪದವೀಧರರ ಸಂಖ್ಯೆಗೆ ಅನುಗುಣವಾಗಿ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕು ಎಂದು ಈಶ ಫೌಂಡೇಷನ್‌ನ ಸಂಸ್ಥಾಪಕರಾದ ಸದ್ಗುರು ಶ್ರೀ ಜಗ್ಗಿ ವಾಸುದೇವ್‌ರವರು ಮಾರ್ಚ್ 20ರಂದು ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ನಡೆದ **ಜೆಎಸ್‌ಎಸ್ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯದ** ಐದನೆಯ ಘಟಿಕೋತ್ಸವ ಭಾಷಣ ಮಾಡುತ್ತಾ ತಿಳಿಸಿದರು. ಬದಲಾದ ಕಾಲಘಟ್ಟಕ್ಕೆ ತಕ್ಕಂತೆ ಉದ್ಯೋಗ ಹೆಚ್ಚಳಕ್ಕೆ ಗಮನಹರಿಸಬೇಕು. ಇಂಜಿನಿಯರ್‌ಗಳು ಮಾಂತ್ರಿಕರ ರೀತಿಯಲ್ಲಿ ಅದ್ಭುತಗಳನ್ನು ಸೃಷ್ಟಿಸುವ ಜಾದೂಗಾರರಾಗಬೇಕು. ಮುಂದಿನ 20 ವರ್ಷಗಳ ಅವಧಿ ಅತ್ಯಂತ ಕ್ಲಿಷ್ಟಕರವಾದದ್ದು. ಇದು ಇಂಜಿನಿಯರ್‌ಗಳ ಕಾಲ. ಕೋಟ್ಯಂತರ ಜನರ ಜೀವನ ಮಟ್ಟವನ್ನು ಉನ್ನತೀಕರಿಸುವ ಸವಾಲು ಮತ್ತು ಜವಾಬ್ದಾರಿ ಇಂಜಿನಿಯರಿಂಗ್ ವಿದ್ಯಾರ್ಥಿಗಳ ಮೇಲಿದೆ. ಒಂದು ಕ್ಷೇತ್ರಕ್ಕೆ ಮಾತ್ರವಲ್ಲದೇ ಎಲ್ಲ ಕ್ಷೇತ್ರಗಳಿಗೂ ಇಂಜಿನಿಯರಿಂಗ್ ಪದವೀಧರರ ಅಗತ್ಯವಿದೆ. ಇದರಲ್ಲಿ ಮಣ್ಣಿನ ರಕ್ಷಣೆಯೂ ಒಂದು ಇಂಜಿನಿಯರಿಂಗ್ ಆಗಿದೆ ಎಂದು ತಿಳಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರಮಠ ಪ್ರತಿಜ್ಞಾವಿಧಿ ಬೋಧಿಸಿದರು. ಕುಲಪತಿಗಳಾದ ಪ್ರೊ. ಎ.ಎನ್. ಸಂತೋಷ್ ಕುಮಾರ್ ಸ್ವಾಗತಿಸಿದರು. ಕುಲಸಚಿವರಾದ ಪ್ರೊ. ಎಸ್.ಎ. ಧನರಾಜ್ ವಂದಿಸಿದರು. ತಾಂತ್ರಿಕ ಶಿಕ್ಷಣ ವಿಭಾಗದ ನಿರ್ದೇಶಕರಾದ ಡಾ. ಬಿ. ಸುರೇಶ, ಪರೀಕ್ಷಾ ನಿಯಂತ್ರಣಾಧಿಕಾರಿಗಳಾದ ಪ್ರೊ. ಪಿ. ನಂಜುಂಡಸ್ವಾಮಿ ಉಪಸ್ಥಿತರಿದ್ದರು.



ಸುತ್ತೂರು ಮಠದ ಜೆಎಸ್‌ಎಸ್ ಉಚಿತ ವಸತಿ ಶಾಲೆಗೆ ಈ ಸಾಲಿನಲ್ಲಿ ಪ್ರವೇಶ ಬಯಸಿ ಬಂದ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಆಡಳಿತಾಧಿಕಾರಿಗಳಾದ ಶ್ರೀ ಎಸ್.ಪಿ. ಉದಯಶಂಕರ್‌ರವರು ಪ್ರವೇಶ ಅರ್ಜಿಗಳನ್ನು ವಿತರಿಸಿದರು. ಚಿತ್ರದಲ್ಲಿ ಸಂಯೋಜನಾಧಿಕಾರಿಗಳು, ಶಾಲಾ ಮುಖ್ಯೋಪಾಧ್ಯಾಯರುಗಳು ಕೂಡ ಇದ್ದಾರೆ.

## ಭಾರತೀಯ ಮಹಿಳೆಯರು ಉದ್ಯಮಿಗಳಾಗಲು ಮುಂದಾಗಬೇಕು

ಭಾರತೀಯ ಮಹಿಳೆಯರು ಉದ್ಯಮಿಗಳಾಗಲು ಮುಂದಾಗಬೇಕು ಎಂದು ಅಂತಾರಾಷ್ಟ್ರೀಯ ಹಣಕಾಸು ಸಂಸ್ಥೆಯ ಉಪ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಗೀತಾ ಗೋಪಿನಾಥ್‌ರವರು ಹೇಳಿದರು.

**ಮೈಸೂರಿನ ಜೆಎಸ್ಎಸ್ ಮಹಿಳಾ ಕಾಲೇಜಿನಲ್ಲಿ** ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 5.3.2023ರಂದು ನಡೆದ 15ನೇ ಪದವೀಧರ ದಿನಾಚರಣೆಯಲ್ಲಿ ಮಾತನಾಡಿದ ಅವರು ಮಹಿಳೆಯರು ಆತ್ಮಸ್ಥೈರ್ಯ ಬೆಳೆಸಿಕೊಳ್ಳುವುದರ ಮೂಲಕ ಅವಕಾಶಗಳನ್ನು ಸದುಪಯೋಗ ಪಡೆಸಿಕೊಳ್ಳಬೇಕು. ಜ್ಞಾನಕ್ಕಿಂತ ಮಿಗಿಲಾದದ್ದು ಯಾವುದೂ ಇಲ್ಲ. ಪ್ರತಿಯೊಬ್ಬರಲ್ಲಿಯೂ ಸಹಾಯ ಮಾಡುವ ಮನೋಭಾವನೆ ಇರಬೇಕು. ಸಮಾಜದ ಸರ್ವಾಂಗೀಣ ಅಭಿವೃದ್ಧಿ ಪ್ರತಿಯೊಬ್ಬರ ಕರ್ತವ್ಯ. ಜೆಎಸ್ಎಸ್ ವಿದ್ಯಾಸಂಸ್ಥೆ ಎಲ್ಲಾ ವರ್ಗದವರಿಗೂ ಶಿಕ್ಷಣ ನೀಡುವುದರ ಮೂಲಕ ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಭಾರತವು ಜಿ–20 ಸಮ್ಮೇಳನದ ಮುಂದಾಳತ್ವ ವಹಿಸಿರುವುದು ಹೆಮ್ಮೆಯ ವಿಷಯ. ಈ ಸಮ್ಮೇಳನ ಯಶಸ್ವಿಯಾಗಲು ಅಂತಾರಾಷ್ಟ್ರೀಯ ಸಹಕಾರ ಅತ್ಯಗತ್ಯ ಎಂದು ಹೇಳಿದರು.

2021–22ನೇ ಸಾಲಿನ ಶೈಕ್ಷಣಿಕ ವರ್ಷದ ಒಟ್ಟು 687 ವಿದ್ಯಾರ್ಥಿನಿಯರಿಗೆ ಪದವಿ ಪ್ರದಾನ ಮಾಡಲಾಯಿತು. ಕಲಾ ವಿಭಾಗದಲ್ಲಿ ಕು. ಬಿ.ಹೆಚ್. ಹರ್ಷಿತರಾವ್, ವಿಜ್ಞಾನ ವಿಭಾಗದಲ್ಲಿ ಕು. ಎಸ್.ಎಸ್. ಅಪೂರ್ವ, ವಾಣಿಜ್ಯ ವಿಭಾಗದಲ್ಲಿ ರಂಜಲ್‌ದಿಯಾ ಶೆಣೈ, ವ್ಯವಹಾರ ನಿರ್ವಹಣಾ ವಿಭಾಗದಲ್ಲಿ ಕು. ಪಿ. ಭವ್ಯಶ್ರೀ, ಗಣಕ ವಿಜ್ಞಾನ ವಿಭಾಗದಲ್ಲಿ ಕು. ಎಸ್. ಅಶ್ವಿನಿ, ಎಂಎ ಅರ್ಥಶಾಸ್ತ್ರದಲ್ಲಿ ಪ್ರಿಯಾ, ಎಂಕಾಂನಲ್ಲಿ ಕು. ಸಾಲ್ ಸಬಿಯಾ, ಎಂಎಸ್ಸಿ ರಸಾಯನಶಾಸ್ತ್ರದಲ್ಲಿ ಕು. ಎ. ನಿಹಿಲಾ ಶಿಲ್ವಿಯಾ ಮೊದಲಿಗರಾಗಿ ಪದವಿ ಪಡೆದರು.

ಜೆಎಸ್ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠ ವಿದ್ಯಾರ್ಥಿನಿಯರಿಗೆ ಪ್ರತಿಜ್ಞಾವಿಧಿ ಬೋಧಿಸಿದರು ಹಾಗೂ ಸ್ವತಃ ಚಿತ್ರಿಸಿದ ಅರ್ಥಶಾಸ್ತ್ರಜ್ಞರ ಚಿತ್ರಪಟವನ್ನು ಅರ್ಥಶಾಸ್ತ್ರ ವಿಷಯದಲ್ಲಿ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿನಿಗೆ ಬಹುಮಾನವಾಗಿ ನೀಡಿದರು. ಪ್ರಾಂಶುಪಾಲರಾದ ಡಾ. ಹೆಚ್.ಬಿ. ಸುರೇಶ್, ಕಾಲೇಜಿನ ಶೈಕ್ಷಣಿಕ ಡೀನ್‌ರಾದ ಡಾ. ರೇಚಣ್ಣ, ಪರೀಕ್ಷಾಂಗ ನಿಯಂತ್ರಣಾಧಿಕಾರಿಗಳಾದ ಶ್ರೀ ಎಂ.ಎಂ ಸ್ವಾಮಿ, ಜೆಎಸ್ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ಸಹಾಯಕ ನಿರ್ದೇಶಕರಾದ ಶ್ರೀ ಬಿ. ನಿರಂಜನಮೂರ್ತಿ, ಕಾಲೇಜಿನ ನಿವೃತ್ತ ಪ್ರಾಂಶುಪಾಲರುಗಳು, ಕಾಲೇಜಿನ ಬೋಧಕ–ಬೋಧಕೇತರವರ್ಗ, ಪೋಷಕರು ಹಾಗೂ ನೂತನ ಪದವೀಧರರು ಪಾಲ್ಗೊಂಡಿದ್ದರು. ಡಾ. ಎಚ್.ಬಿ. ಸುರೇಶ್ ಸ್ವಾಗತಿಸಿದರು. ಶ್ರೀ ಹೊನ್ನಶೆಟ್ಟಿ ವಂದಿಸಿದರು. ಶ್ರೀ ಆರ್.ಎಸ್. ಕುಮಾರ್ ನಿರೂಪಿಸಿದರು.

## ದೊಡ್ಡ ಕನಸುಗಳೊಂದಿಗೆ ಪರಿಶ್ರಮದಿಂದ ದುಡಿಯಿರಿ

ದೊಡ್ಡ ಕನಸುಗಳನ್ನು ಕಂಡು ಅವುಗಳನ್ನು ನನಸು ಮಾಡಿಕೊಳ್ಳಲು ಪರಿಶ್ರಮದಿಂದ ದುಡಿದು ಸಾಧಕರಾಗಿ ಹೊರಹೊಮ್ಮಬೇಕು ಎಂದು ಕರ್ನಾಟಕ ಸರ್ಕಾರದ ವಾಣಿಜ್ಯ ತೆರಿಗೆಗಳ ಇಲಾಖೆಯ ಆಯುಕ್ತರಾದ ಶ್ರೀಮತಿ ಸಿ. ಶಿಖಾರವರು ಹೇಳಿದರು.

**ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.3.2023 ರಂದು ನಡೆದ 15ನೆಯ ಪದವೀಧರರ ದಿನಾಚರಣೆಯಲ್ಲಿ ಮಾತನಾಡಿದ ಅವರು ವಿದ್ಯಾರ್ಥಿಗಳಿಗೆ ಪದವೀಧರರ ದಿನಾಚರಣೆ ಬಹುಮುಖ್ಯವಾದ ದಿನ. ಹಿಂದಿನ ನಿಮ್ಮ ಗುರಿ ಕನಸುಗಳು ಸಾಕಾರಗೊಂಡು ಮುಂದಿನ ಜೀವನದ ಗುರಿ ಮತ್ತು ಕನಸುಗಳನ್ನು ಕಾಣುವ ಕ್ಷಣವಿದು. ವಿದ್ಯಾರ್ಥಿಗಳು ಸದಾ ಕ್ರಿಯಾಶೀಲರಾಗಿರಬೇಕು. ಹೊಸ ಅನ್ವೇಷಣೆಗಳ ಕಡೆ ಚಿಂತಿಸಬೇಕು. ನಕಾರಾತ್ಮಕವಾದ ಆಲೋಚನೆಯಿಂದ ದೂರವಿರಬೇಕು. ವಿದ್ಯಾರ್ಥಿಗಳು

ದೇಶಕ್ಕೆ, ರಾಜ್ಯಕ್ಕೆ, ಸಮಾಜಕ್ಕೆ ಕೊಡಬಹುದಾದ ಅತ್ಯುತ್ತಮ ಕೊಡುಗೆಗಳ ಬಗ್ಗೆ ಸದಾ ಚಿಂತಿಸಿ. ತಂತ್ರಜ್ಞಾನ ಇಂದು ತುಂಬಾ ಅಗತ್ಯವಾಗಿದ್ದು, ಇದರೊಂದಿಗೆ ವಿದ್ಯಾರ್ಥಿಗಳ ಒಡನಾಟ ಹೆಚ್ಚಿದೆ. ಸಾಮಾಜಿಕ ಜಾಲತಾಣಗಳ ಬಳಕೆ ಇಂದು ವ್ಯಸನವಾಗಿದೆ. ಎಲ್ಲಕ್ಕಿಂತ ಮನುಷ್ಯನ ಮೆದುಳಿನ ಕಾರ್ಯಶಕ್ತಿಯೇ ಅತ್ಯುತ್ತಮವಾದದ್ದು. ಆದುದರಿಂದ ವಿದ್ಯಾರ್ಥಿಗಳು ಮೆದುಳನ್ನು ನಂಬಿ ಮನೋಸಾಮರ್ಥ್ಯವನ್ನು ಹೆಚ್ಚಿಸಿಕೊಳ್ಳಬೇಕು ಎಂದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿಗಳಾದ ಡಾ. ಸಿ.ಜಿ. ಬೆಟಸೂರಮಠರವರು ನೂತನ ಪದವೀಧರರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ವಿಭಾಗಗಳಿಂದ ಒಟ್ಟು 1054 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಹೆಚ್ಚು ಅಂಕ ಪಡೆದ ಒಟ್ಟು 65 ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಮಾಣ ಪತ್ರಗಳನ್ನು ನೀಡಿ ಪುರಸ್ಕರಿಸಲಾಯಿತು. ಹತ್ತು ಜನ ವಿದ್ಯಾರ್ಥಿಗಳು ವಿವಿಧ ದತ್ತಿ ಪುರಸ್ಕಾರಕ್ಕೆ ಪಾತ್ರರಾದರು.

ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತಿಸಿ, ಪ್ರಾಸ್ತಾವಿಕ ಮಾತನಾಡಿದರು. ಕು. ಸನ್ನಿಧಿ ಮತ್ತು ಕು. ವಾಸವಿ ಭಟ್ ಪ್ರಾರ್ಥಿಸಿದರು. ಪ್ರಾಂಶುಪಾಲರಾದ ಪ್ರೊ. ಎಂ.ಪಿ. ವಿಜಯೇಂದ್ರ ಕುಮಾರ್ ವಂದಿಸಿದರು. ಪರೀಕ್ಷಾ ನಿಯಂತ್ರಣಾಧಿಕಾರಿಗಳಾದ ಡಾ. ಬಿ. ಪ್ರಭುಸ್ವಾಮಿ ಉಪಸ್ಥಿತರಿದ್ದರು. ಡಾ. ಎಸ್. ರಾಜೇಂದ್ರ ಪ್ರಸಾದ್ ಕಾರ್ಯಕ್ರಮ ನಿರೂಪಿಸಿದರು.

ಅನ್ಯ ರಜವ ಸೋಂಕದೆ, ತನ್ನ ರಜವ ಬಾಧಿಸದೆ
ರವಿಯ ಬೆಳಸ ಬಳಸದೆ, ಲಿಂಗದ ಬೆಳಸ ತಂದು
ಜಂಗಮದಲ್ಲಿ ಸವೆಸುತ್ತಿಪ್ಪ ಲಿಂಗಭಕ್ತ
ಆ ಭಕ್ತನಲ್ಲಿ ಗುಹೇಶ್ವರಲಿಂಗವಿಪ್ಪನು

**ಅಲ್ಲಮಪ್ರಭು**



ಸುತ್ತೂರು ಶ್ರೀಕ್ಷೇತ್ರದಲ್ಲಿ ಯುಗಾದಿ ಹಬ್ಬದ ಅಂಗವಾಗಿ ಅಲಂಕೃತ ಹೊನ್ನೇರುಗಳು ಶ್ರೀಮಠದಿಂದ ಹೊರಟು ಕರ್ತೃಗದ್ದುಗೆಯ ಮೂಲಕ ಜಮೀನುಗಳಿಗೆ ತೆರಳುವುದರೊಂದಿಗೆ ಹೊಸ ಕೃಷಿ ಕಾರ್ಯಕ್ಕೆ ಚಾಲನೆ ನೀಡಲಾಯಿತು. ಮೆರವಣಿಗೆಯಲ್ಲಿ ವಿವಿಧ ಕಲಾ ತಂಡಗಳವರು ಪಾಲ್ಗೊಂಡಿದ್ದರು

## ಶ್ರೀ ಸುತ್ತೂರು ಕ್ಷೇತ್ರದಲ್ಲಿ ಯುಗಾದಿ, ಅಲ್ಲಮಪ್ರಭು ಜಯಂತಿ ಹಾಗೂ ಪಂಚಾಂಗ ಶ್ರವಣ

**ಶ್ರೀ ಸುತ್ತೂರು ಕ್ಷೇತ್ರದಲ್ಲಿ** ದಿನಾಂಕ 22.3.2023ರಂದು ಪರಮಪೂಜ್ಯ ಜಗದ್ಗುರುಗಳವರ ದಿವ್ಯ ಸಾನ್ನಿಧ್ಯದಲ್ಲಿ ಯುಗಾದಿ, ಅಲ್ಲಮಪ್ರಭು ಜಯಂತಿ ಹಾಗೂ ಪಂಚಾಂಗ ಶ್ರವಣ ಕಾರ್ಯಕ್ರಮಗಳು ಜರುಗಿದವು. ಮೈಸೂರು ವಿಶ್ವವಿದ್ಯಾನಿಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ನಿರ್ದೇಶಕರಾದ ಡಾ. ವಿಜಯಕುಮಾರಿ ಎಸ್. ಕರಿಕಲ್‌ರವರು ಅಲ್ಲಮಪ್ರಭು ದೇವರ ವಚನಗಳ ವೈಶಿಷ್ಟ್ಯವನ್ನು ಕುರಿತು ಮಾತನಾಡುತ್ತಾ ಅಲ್ಲಮಪ್ರಭುಗಳು ಮೇರು ವ್ಯಕ್ತಿತ್ವವನ್ನು ಹೊಂದಿದ್ದು ಯಾವುದೇ ವಿಚಾರಗಳನ್ನು ವಿಮರ್ಶೆ ಮಾಡದೆ ಒಪ್ಪಿಕೊಳ್ಳುತ್ತಿರಲಿಲ್ಲ. ವಚನದಲ್ಲಿ ಅಂತರಂಗದ ತೊಳಲಾಟ, ಆತಂಕ ಇರುವುದಿಲ್ಲ, ಆತ್ಮ ವಿಶ್ವಾಸದಿಂದ ಸ್ಥಿತಿ ಸಿದ್ಧಾಂತಗಳು ಇರುವುದನ್ನು ನಾವು ಕಾಣುತ್ತೇವೆ. ಗಹನವಾದ ಆಧ್ಯಾತ್ಮ, ತಾತ್ವಿಕ ವಿಚಾರಗಳು ವಚನಗಳಲ್ಲಿ ಇರುತ್ತವೆ. ಅಲ್ಲಮನ ಆಧ್ಯಾತ್ಮಿಕ ಅನುಭವಗಳ ಅಸಮಾನ್ಯತೆಯಿಂದ ಅವರ ವಚನಗಳನ್ನು ಅರ್ಥ ಮಾಡಿಕೊಳ್ಳುವುದು ಕಷ್ಟ. ಅವರದ್ದು ಬಹುಮಟ್ಟಿಗೆ ರೂಪಕ ಭಾಷೆಯಾಗಿದೆ. ಅವರ ಕೃತಿಗಳು ಎಲ್ಲಾ ರೀತಿಯ ಜ್ಞಾನಕ್ಕೆ ದಾರಿದೀಪವಾಗಿವೆ. ಮನಸ್ಸು ಶುದ್ಧಿ ಇಲ್ಲದ ಮೇಲೆ ಲಿಂಗಪೂಜೆಯನ್ನು ಮಾಡಿದರೆ ಏನು ಫಲ ಎಂದು ಹೇಳುವ ಮೂಲಕ ಆಡಂಬರದ ಆಚರಣೆ ಮಾಡುವುದನ್ನು ಒಪ್ಪುತ್ತಿರಲಿಲ್ಲ. ಮನುಷ್ಯನನ್ನು ಆಸೆ ಸೆಳೆಯುತ್ತದೆ ಆದರೆ ಅದನ್ನು ಅಳಿಯಬೇಕು ಎಂದು ಸಾರಿದವರು ಅಲ್ಲಮಪ್ರಭು ಎಂದರು.

ಮೈಸೂರಿನ ಭಾರತೀಯ ಜ್ಯೋತಿರ್ವಿಜ್ಞಾನ ಸಂಶೋಧನಾ ಕೇಂದ್ರದ ಅಧ್ಯಕ್ಷರು ಹಾಗೂ ಪಂಚಾಂಗಕರ್ತರಾದ ಸಿದ್ಧಾಂತಿ ಡಾ. ಕೆ.ಜಿ. ಪುಟ್ಟಹೊನ್ನಯ್ಯನವರು ಸುತ್ತೂರು ಶ್ರೀ ಶಿವರಾತ್ರೀಶ್ವರ ಪಂಚಾಂಗವು ರಾಷ್ಟ್ರೀಯ ಪಂಚಾಂಗದ ವಿವರಗಳನ್ನು ಒಳಗೊಂಡಿದೆ. ಈ ವರ್ಷ ಅಧಿಕ ಮಾಸವು ಶ್ರಾವಣ ಮಾಸದಲ್ಲಿ ಬರುತ್ತದೆ. ಶ್ರಾವಣ ಮಾಸವು ಅತ್ಯಂತ ಶ್ರೇಷ್ಠವಾದ ಮಾಸವಾಗಿದೆ ಎನ್ನುತ್ತಾ ರಾಶಿ ಫಲಗಳ ಬಗ್ಗೆ ತಿಳಿಸಿದರು.

ಶ್ರೀಮಠ ಹಾಗೂ ಗ್ರಾಮದ ಹೊನ್ನೇರುಗಳು ಶ್ರೀಮಠದಿಂದ ಮಂಗಳವಾದ್ಯ ಹಾಗೂ ವಿವಿಧ ಜನಪದ ಕಲಾ ತಂಡಗಳೊಂದಿಗೆ ಮೆರವಣಿಗೆಯಲ್ಲಿ ಹೊರಟು ಜಮೀನುಗಳಿಗೆ ತೆರಳಿ ಭೂಮಿತಾಯಿಗೆ ಪೂಜೆ ಸಲ್ಲಿಸಿ ಹೊಸ ವರ್ಷದ ಕೃಷಿ ಕಾಯಕಕ್ಕೆ ಚಾಲನೆ ನೀಡಲಾಯಿತು. ಕರ್ತೃಗದ್ದುಗೆ ಹಾಗೂ ಶ್ರೀಕ್ಷೇತ್ರದ ಎಲ್ಲಾ ದೇವಸ್ಥಾನಗಳಲ್ಲಿ ವಿಶೇಷ ಪೂಜೆಗಳು ನೆರವೇರಿದವು. ಇದೇ ಸಂದರ್ಭದಲ್ಲಿ 25ಕ್ಕೂ ಹೆಚ್ಚು ವಟುಗಳು ದೀಕ್ಷಾ ಸಂಸ್ಕಾರ ಪಡೆದರು. ಜೆಎಸ್‌ಎಸ್ ವಸತಿ ಶಾಲೆಯ ವಿದ್ಯಾರ್ಥಿಗಳಾದ ಕು. ಕೆ. ಪ್ರವೀಣ್ ಆಚಾರ್ ಕೊಳಲು ವಾದನ ಪ್ರಸ್ತುತಿ ಪಡಿಸಿದರು, ಕು. ಯತೀಶ್ ತಬಲಸಾತ್ ನೀಡಿದನು.

ಶ್ರೀ ನೀಲಕಂಠಸ್ವಾಮಿ ಮಠ, ಕುಂದೂರು ಮಠ, ಚುಂಚನಹಳ್ಳಿ ಮಠ, ಹೊನ್ನಲಗೆರೆ ಮಠ, ಪಂಚಗವಿ ಮಠ, ಕಳ್ಳೀಪುರ ಮಠಗಳ ಶ್ರೀಗಳು, ಮಾಜಿ ವಿಧಾನಪರಿಷತ್ ಸದಸ್ಯರು ಹಾಗೂ ಉದ್ಯಮಿಗಳಾದ ಶ್ರೀ ರಘು ಆಚಾರ್ ಮತ್ತು ಕುಟುಂಬ ವರ್ಗದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಶ್ರೀ ಅಂದಯ್ಯ ಶಿರೂರಮಠ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಜೆಎಸ್‌ಎಸ್ ಉಚಿತ ಶಾಲೆ ವಿದ್ಯಾರ್ಥಿಗಳು ಪ್ರಾರ್ಥನೆ ಸಲ್ಲಿಸಿದರು. ಶ್ರೀ ಬಿ.ಆರ್. ಪಂಚಾಕ್ಷರಿ ವಂದಿಸಿದರು.

**ಮಾಸಿಕ ಸಾಮೂಹಿಕ ವಿವಾಹ – 2023 ಶ್ರೀ ಸುತ್ತೂರು ಕ್ಷೇತ್ರ**

**ಮೇ 24, ಬುಧವಾರ**

**ವಿವರಗಳಿಗೆ ಸಂಪರ್ಕಿಸಿ:**

**ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು**
**ದೂರವಾಣಿ : 08221-232223, 232224**

# ಜಾಗತಿಕ ಅವಕಾಶಗಳನ್ನು ಪಡೆದುಕೊಳ್ಳುವಲ್ಲಿ ಇಂದಿನ ಯುವಜನತೆ ಅದೃಷ್ಟವಂತರು




ಪ್ರಸ್ತುತ ಭಾರತವು ಯುವಜನರಿಗೆ ಸಾಕಷ್ಟು ಅವಕಾಶಗಳನ್ನು ಹೊತ್ತು ಉತ್ತುಂಗದಲ್ಲಿದೆ. ಪ್ರಸ್ತುತ ಪೀಳಿಗೆಯ ವಿದ್ಯಾರ್ಥಿಗಳು ತುಂಬಾ ಅದೃಷ್ಟವಂತರು. ರಾಷ್ಟ್ರೀಯ ಮತ್ತು ಜಾಗತಿಕ ಮಟ್ಟದಲ್ಲಿ ವ್ಯಾಪಕ ಅವಕಾಶಗಳನ್ನು ಹೊಂದಿದ್ದಾರೆ. ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲಾ ಅವಕಾಶಗಳೊಂದಿಗೆ ದೇಶವು ಹಳೆಯುದರಿಂದ ಹೊಸ ಮುಖಕ್ಕೆ ರೂಪಾಂತರಗೊಂಡಿದೆ. ಕೇಂದ್ರ ಸರ್ಕಾರದ ಅತ್ಯಂತ ಮೌಲ್ಯಯುತ ಮತ್ತು ದೂರದೃಷ್ಟಿಯ ಉಪಕ್ರಮಗಳೊಂದಿಗೆ ಶಿಕ್ಷಣ, ತಂತ್ರಜ್ಞಾನ, ಉದ್ಯೋಗ ಮತ್ತು ಅಭಿವೃದ್ಧಿ ಕ್ಷೇತ್ರಗಳಲ್ಲಿ ರಾಷ್ಟ್ರವು ಉತ್ತಮವಾಗಿ ಬೆಳೆಯುತ್ತಿದೆ ಎಂದು ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆಯ ರಾಜ್ಯ ಸಚಿವರು ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನದ ರಾಜ್ಯ ಸಚಿವರು ಆದ ಶ್ರೀ ರಾಜೀವ್ ಚಂದ್ರಶೇಖರ್ ಹೇಳಿದರು.

ದಿನಾಂಕ 24.3.2023ರಂದು **ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ಕೌಶಲ ಅಭಿವೃದ್ಧಿ ಮತ್ತು ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿ, ಯೋಜನೆಗಳನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸದೆ ಕೇವಲ ವಿವರಿಸುವ ವ್ಯವಸ್ಥೆಯು ಹೋಗಿ ನವಭಾರತ ನಿರ್ಮಾಣವಾಗಿರುವ ಈ ಸನ್ನಿವೇಶದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಬೆಳವಣಿಗೆಗಳು ನಡೆಯುತ್ತಿವೆ. ಫಲಾನುಭವಿಗಳಿಗೆ ಸ್ವಯಂಪ್ರೇರಿತ, ಭ್ರಷ್ಟಾಚಾರ ಮತ್ತು ಮಧ್ಯಂತರ–ಮುಕ್ತ ಫಲಪ್ರದ ಫಲಿತಾಂಶಗಳನ್ನು ಪಡೆಯುವ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಗಳಾಗುತ್ತಿವೆ. ಬ್ಯಾಂಕಿಂಗ್ ಕ್ಷೇತ್ರಗಳ ಬೆಳವಣಿಗೆ, ರೈಲು ಸಾರಿಗೆ, 5ಜಿ ನೆಟ್‌ವರ್ಕ್‌ಗಳ ನಿರ್ಮಾಣ ಇತ್ಯಾದಿಗಳಲ್ಲಿ ಆಮೂಲಾಗ್ರ ಬದಲಾವಣೆಗಳಾಗಿವೆ ಎಂದರು.

ಭಾರತವೇ ಇಂದು 100% ಮೊಬೈಲ್ ಫೋನ್‌ಗಳನ್ನು ತಯಾರಿಸುತ್ತಿದೆ. ಭಾರತ ಸರ್ಕಾರದ ಪ್ರಯತ್ನಗಳು, ವರ್ಷದಲ್ಲಿ 90,000 ಕೋಟಿ ಆಪಲ್ ಐ–ಫೋನ್‌ಗಳನ್ನು ರಫ್ತು ಮಾಡುವ ಸಾಮರ್ಥ್ಯ ಮತ್ತು ಕೋವಿಡ್ ಬಿಕ್ಕಟ್ಟನ್ನು ಎದುರಿಸಲು ತೆಗೆದುಕೊಂಡ ದೃಢವಾದ ಮತ್ತು ಸಮಯೋಚಿತ ಕ್ರಮಗಳು ಅಸಾಧಾರಣವಾದವು ಎಂದು ಹೇಳಿದರು.

ಮುಂಚೂಣಿಯಲ್ಲಿರುವ ಆರ್ಥಿಕತೆಗಾಗಿ ದೇಶವು ತೆಗೆದುಕೊಳ್ಳುವ ಕಾರ್ಯತಂತ್ರಗಳು ಪರಿಣಾಮಕಾರಿಯಾಗಿವೆ. ಅಭಿವೃದ್ಧಿಯ ವಿಷಯದಲ್ಲಿ ಭಾರತವು ಯುಎಸ್, ಯುಕೆ ಮತ್ತು ಚೀನಾಕ್ಕಿಂತ ಮೇಲುಗೈ ಸಾಧಿಸಿದೆ. 2020 ರಲ್ಲಿ ಕೋವಿಡ್ ಸಾಂಕ್ರಾಮಿಕ ಸ್ಥಿತಿಯನ್ನು ನಿವಾರಿಸಿದ ನಂತರ ಭಾರತವು ಕಮಾಂಡಿಂಗ್ ಸ್ಥಾನದಲ್ಲಿದೆ. ಚೀನಾದಲ್ಲಿ ಇನ್ನೂ 5 ಮತ್ತು 6 ನೇ ಲಾಕ್‌ಡೌನ್‌ಗಳು ಜಾರಿಯಲ್ಲಿವೆ. ಆದರೆ

210 ಕೋಟಿಗೂ ಹೆಚ್ಚು ಮೇಡ್ ಇನ್ ಇಂಡಿಯಾ ಕೋವಿಡ್ ಲಸಿಕಾ ಡೋಸ್‌ಗಳನ್ನು ತಲುಪಿಸುವಲ್ಲಿ ನಾವು ಯಶಸ್ವಿಯಾಗಿದ್ದೇವೆ. ವಿದೇಶಿ ನೇರ ಹೂಡಿಕೆ ಮತ್ತು ವೇಗವಾಗಿ ಬೆಳೆಯುತ್ತಿರುವ ತಂತ್ರಜ್ಞಾನ ಕ್ಷೇತ್ರಗಳಿಗೆ ಭಾರತದ ಕೊಡುಗೆ ಅಪಾರವಾದುದು. ಉದ್ಯೋಗಾವಕಾಶಕ್ಕೆ ಸೂಕ್ತವಾದ ಕೌಶಲ್ಯ–ಆಧಾರಿತ ಕೋರ್ಸ್‌ಗಳನ್ನು ಅಧ್ಯಯನ ಮಾಡಬೇಕೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಶ್ರೀ ರಾಜೀವ್ ಚಂದ್ರಶೇಖರ್ ಅವರು ಕೇಂದ್ರ ಸರ್ಕಾರದ ಮೂಲಕ ಲಭ್ಯವಿರುವ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳು ಮತ್ತು ಉದ್ಯಮಶೀಲತೆಯ ಅವಕಾಶಗಳ ಕುರಿತು ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. 500ಕ್ಕೂ ಹೆಚ್ಚು ಸ್ನಾತಕೋತ್ತರ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ಕಾರ್ಯದರ್ಶಿ ವಿನಯ್ ಬಿದರಿ, ಮೈಸೂರು ನಗರ ಬಿಜೆಪಿ ಅಧ್ಯಕ್ಷ ಶ್ರೀ ಶ್ರೀವತ್ಸ ಉಪಸ್ಥಿತರಿದ್ದರು. ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕ ಪ್ರೊ. ಆರ್. ಮುಗೇಶಪ್ಪ ಮತ್ತು ಸಹಾಯಕ ನಿರ್ದೇಶಕ ಶ್ರೀ ಬಿ. ನಿರಂಜನ ಮೂರ್ತಿ ಉಪಸ್ಥಿತರಿದ್ದರು. ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕ ಪ್ರೊ. ಬಿ.ವಿ. ಸಾಂಬಶಿವಯ್ಯ ಸ್ವಾಗತಿಸಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಪ್ರಾಚಾರ್ಯ ಪ್ರೊ. ಎಂ.ಪಿ. ವಿಜಯೇಂದ್ರ ಕುಮಾರ್ ವಂದಿಸಿದರು. ಕು. ವಾಸವಿ ಪ್ರಾರ್ಥಿಸಿದರು. ಡಾ. ಎನ್. ರಾಜೇಂದ್ರಪ್ರಸಾದ್ ನಿರೂಪಿಸಿದರು.

## ಜ್ಞಾನದ ರೂಪಾಂತರವೇ ಅಭಿವೃದ್ಧಿಯ ಸಂಕೇತ

ಸಂದರ್ಭಕ್ಕೆ, ಅವಶ್ಯಕತೆಗೆ ತಕ್ಕಂತೆ ಜ್ಞಾನದ ಮೂಲಗಳು ರೂಪಾಂತರ ಹೊಂದುತ್ತವೆ. ಇಂತಹ ರೂಪಾಂತರವು ಅಭಿವೃದ್ಧಿಯ ದ್ಯೋತಕವಾಗಿರುತ್ತದೆ ಎಂದು ಮೈಸೂರಿನ ಬೆಮೆಲ್‌ನ ನಿವೃತ್ತ ಉಪ ವ್ಯವಸ್ಥಾಪಕರಾದ ಎಂ.ಕೆ. ರವಿಶಂಕರ್ ಹೇಳಿದರು.

ಊಟಿ ರಸ್ತೆಯಲ್ಲಿರುವ **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ದಿನಾಂಕ 2.3.2023ರಂದು ಏರ್ಪಡಿಸಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಹಣಕಾಸಿನ ನಿರ್ವಹಣೆಗೆ ವೆಚ್ಚ ನಿರ್ವಹಣೆಯ ಪಾತ್ರ ದೊಡ್ಡದಾಗಿರುತ್ತದೆ. ಯಾವುದೇ ಕಂಪೆನಿಗಳಲ್ಲಿ ಹಣಕಾಸಿನ ನಿರ್ವಹಣೆಗೆ ಸಂಬಂಧಿಸಿದಂತೆ ನಿರ್ಧಾರ ತೆಗೆದುಕೊಳ್ಳುವುದರಲ್ಲಿ ಹಣದ ಒಳಹರಿವು, ಹೊರಹರಿವು, ಬಂಡವಾಳ ಹೂಡಿಕೆ ಮತ್ತು ಸವಕಳಿಯಂತಹ ಅಂಶಗಳು ಮುಖ್ಯ ಪಾತ್ರ ವಹಿಸುತ್ತವೆ ಎಂದು ಕೆಲವು ಪ್ರಕರಣಗಳು ಮತ್ತು ಉದಾಹರಣೆಗಳ ಮೂಲಕ ವಿವರಿಸಿದರು.

ಕಾಲೇಜಿನ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ದೇಶದ ಆರ್ಥಿಕತೆ, ಅಭಿವೃದ್ಧಿ ಮತ್ತು ಅದರ ಹಿನ್ನೆಲೆಯು ಆಯವ್ಯಯದ ಮೇಲೆ ಅವಲಂಬಿತವಾಗಿರುತ್ತದೆ. ಆದಾಯ ತೆರಿಗೆ, ಸರಕು ಮತ್ತು ಸೇವಾ ತೆರಿಗೆಯು ಅಭಿವೃದ್ಧಿಯ ಭಾಗವಾಗಿದೆ. ಅದು ದೇಶದ ಜಿಡಿಪಿಯ ಏರಿಕೆಗೆ ಸಹಕಾರಿಯಾಗಿದೆ. ಇಂದಿನ ವಾರ್ಷಿಕ ಬಜೆಟ್ ಮುಂದಿನ ಆರ್ಥಿಕ ಬೆಳವಣಿಗೆಗೆ ಸಹಕಾರಿಯಾಗಿದೆ ಎಂದರು.

ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ವಿಭಾಗದ ಕು. ಅರ್ಪಿತಾ ಸ್ವಾಗತಿಸಿದರು. ವಿದ್ಯಾರ್ಥಿ ಕು. ಜೆ.ಆರ್. ಶ್ರೀನಿಧಿ ವಂದಿಸಿದರು. ಕು. ಆರ್. ಭೂಮಿಕಾ ಪ್ರಾರ್ಥಿಸಿದರು. ಕು. ಟಿ.ಎಸ್. ಐಶ್ವರ್ಯ ಕಾರ್ಯಕ್ರಮ ನಿರೂಪಿಸಿದರು. ಪ್ರಾಂಶುಪಾಲರಾದ ಪ್ರೊ. ಎಂ.ಪಿ. ವಿಜಯೇಂದ್ರ ಕುಮಾರ್, ಸ್ನಾತಕೋತ್ತರ ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಎಲ್. ದಿವ್ಯ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ತುಮಕೂರು ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರಾದ ಪ್ರೊ. ಪರಮಶಿವಯ್ಯ ಮತ್ತು ಚಾರ್ಟರ್ಡ್ ಅಕೌಂಟೆಂಟ್ ಶ್ರೀ ಕೇಶವ ಡೋಂಗ್ರೆ ಹಾಗೂ ಶ್ರೀ ವಾಗೀಶ ಹೆಗ್ಡೆ ಗೋಷ್ಠಿಗಳನ್ನು ನಡೆಸಿಕೊಟ್ಟರು. ಅಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ಕಾಲೇಜಿನ ಇತರೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಶಿಸ್ತಿನ ಜೀವನದಿಂದ ಯಶಸ್ಸು



ಕರ್ನಾಟಕ ಮತ್ತು ಗೋವಾ ಎನ್‌ಸಿಸಿ ನಿರ್ದೇಶನಾಲಯದ ವ್ಯಾಪ್ತಿಯಲ್ಲಿ ಎರಡನೆಯ ಸ್ಥಾನವನ್ನು ಗಳಿಸಿ ಅತ್ಯುತ್ತಮ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಈ ಸಂಸ್ಥೆಯ ಸಾಧನೆ ಶ್ಲಾಘನೀಯವಾದದ್ದು. ನೀವೆಲ್ಲಾ ಎನ್‌ಸಿಸಿ ಕೆಡಟ್ ಆಗಿ ಗುರುತಿಸಿಕೊಂಡಿರುವುದು ಹೆಮ್ಮೆಯ ವಿಷಯ. ಎನ್‌ಸಿಸಿ ನಿಮಗೆ ಶಿಸ್ತನ್ನು ಕಲಿಸುತ್ತದೆ. ಎನ್‌ಸಿಸಿಯಲ್ಲಿ ಶಿಸ್ತಿಗೆ ವಿಶೇಷವಾದ ಮಹತ್ವವಿದೆ. ಶಿಸ್ತಿನ ಜೀವನದಿಂದ ಯಶಸ್ಸು ಸಾಧ್ಯ ಎಂದು ಏರ್ ಕಮೋಡರ್ ಭೂಪೇಂದ್ರ ಸಿಂಗ್ ಕನ್ವರ್ ಅವರು ತಿಳಿಸಿದರು.

**ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿಗೆ** ಭೇಟಿ ನೀಡಿದ ಅವರು ಜೆಎಸ್‌ಎಸ್ ರೇಡಿಯೋ 91.2 ಎಫ್.ಎಂ.ನಲ್ಲಿ ಆಯೋಜಿಸಿದ್ದ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಎನ್‌ಸಿಸಿಯ ಮಹತ್ವದ ಬಗ್ಗೆ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿ ಶ್ರೋತೃಗಳು ಕೇಳಿದ ಹಲವಾರು ಪ್ರಶ್ನೆಗಳಿಗೆ ಉತ್ತರಿಸಿ ಸ್ಪಂದಿಸಿದರು. ವಿದ್ಯಾರ್ಥಿಗಳು ಆಧುನಿಕ ಶಿಕ್ಷಣದ ಜೊತೆಗೆ ಮೌಲ್ಯಯುತವಾದ ಜೀವನ ರೂಪಿಸಿಕೊಳ್ಳಬೇಕು. ಭಾರತೀಯ ತತ್ವಶಾಸ್ತ್ರದ ವಿಚಾರಗಳು ಇಂದಿಗೂ ಸಮಾಜದಲ್ಲಿ ಉನ್ನತ ಸ್ಥಾನವನ್ನು ಪಡೆದುಕೊಂಡಿವೆ. ಧರ್ಮ–ಅರ್ಥ–ಕಾಮ–ಮೋಕ್ಷ ಇವುಗಳು ಪರಸ್ಪರ ಹೊಂದಿಕೊಂಡಿವೆ. ಧರ್ಮದಿಂದ ಅರ್ಥವನ್ನು, ಅರ್ಥದಿಂದ ಕಾಮವನ್ನು, ಕಾಮದಿಂದ ಮೋಕ್ಷವನ್ನು ಪಡೆಯುವಂತೆ ನಮ್ಮ ಆಲೋಚನೆ, ದುಡಿಮೆ ಮತ್ತು ಜೀವನ ಶೈಲಿಯನ್ನು ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಶ್ರೋತೃಗಳು ಕರೆ ಮಾಡಿ, ಸಂವಾದ ನಡೆಸಿದರು. ಶ್ರೀಯುತರನ್ನು ಕಾಲೇಜು ಸಮುಚ್ಚಯದ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಗೌರವಪೂರ್ವಕವಾಗಿ ಸನ್ಮಾನಿಸಿದರು. ವೇದಿಕೆಯಲ್ಲಿ ಮೈಸೂರು ಗ್ರೂಪ್ ಕಮಾಂಡರ್ ಎನ್‌ಸಿಸಿ ಕರ್ನಲ್ ಆರ್.ಆರ್. ಮೆನನ್, 14 ಕರ್ನಾಟಕ ಬೆಟಾಲಿಯನ್ ಕಮಾಂಡಿಂಗ್ ಆಫೀಸರ್ ಕರ್ನಲ್ ಮನೀಶ್ ಪ್ರಸಾದ್ ಹಾಗೂ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎಂ. ಪಿ. ವಿಜಯೇಂದ್ರ ಕುಮಾರ್ ಉಪಸ್ಥಿತರಿದ್ದರು. ಎನ್‌ಸಿಸಿ ಅಧಿಕಾರಿ ಲೆ. ಡಾ. ಎಲ್. ವಿನಯ್‌ಕುಮಾರ್ ನಿರೂಪಿಸಿದರು.

## ಕೇಂದ್ರ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗೆ ಕೇಂದ್ರ ಸರ್ಕಾರದ ಆರೋಗ್ಯ ಯೋಜನೆ ಕೌಂಟರ್ ಉದ್ಘಾಟನೆ

ಮೈಸೂರಿನ **ಜೆಎಸ್‌ಎಸ್ ಆಸ್ಪತ್ರೆಯ ಆವರಣದಲ್ಲಿ** ದಿನಾಂಕ 13.3.2023ರಂದು ಕೇಂದ್ರ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗಾಗಿ ಕೇಂದ್ರ ಸರ್ಕಾರದ ಆರೋಗ್ಯ ಯೋಜನೆ (ಸಿಜಿಹೆಚ್‌ಎಸ್)ಗೆ ಕರ್ನಾಟಕ ಲೋಕಸೇವಾ ಆಯೋಗದ ಮಾಜಿ ಅಧ್ಯಕ್ಷರಾದ ಶ್ರೀ ಎಸ್.ಪಿ. ಷಡಕ್ಷರಿಸ್ವಾಮಿ ಮತ್ತು ನೌಕರರ ಭವಿಷ್ಯ ನಿಧಿ ಪ್ರಾದೇಶಿಕ ಆಯುಕ್ತರಾದ ಶ್ರೀ ವಿನಿತ್‌ಕುಮಾರ್ ಸಿಜಿಹೆಚ್‌ಎಸ್‌ಗೆ ಚಾಲನೆ ನೀಡಿದರು.

ಶ್ರೀ ಎಸ್.ಪಿ. ಷಡಕ್ಷರಿಸ್ವಾಮಿಯವರು ಮಾತನಾಡಿ ಕೇಂದ್ರ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರಿಗೆ ಆರೋಗ್ಯ ಸೇವೆ ನೀಡುವ ಯೋಜನೆಯು ಬೆಂಗಳೂರಿನ ಆಸ್ಪತ್ರೆಗಳಲ್ಲಿ ಮಾತ್ರ ದೊರಕುತಿತ್ತು. ಈಗ ಜೆಎಸ್‌ಎಸ್ ಆಸ್ಪತ್ರೆಯು ಸಿಜಿಹೆಚ್‌ಎಸ್ ಫಲಾನುಭವಿಗಳಿಗೆ ಚಿಕಿತ್ಸೆ ನೀಡುವ ಮೈಸೂರಿನ ಏಕೈಕ ಆಸ್ಪತ್ರೆಯಾಗಿದೆ. ಕೇಂದ್ರ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ಇದರ ಸದುಪಯೋಗ ಪಡೆಯಬೇಕೆಂದು ತಿಳಿಸಿದರು.

ಶ್ರೀ ವಿನಿತ್‌ಕುಮಾರ್ ಮಾತನಾಡಿ ಕೇಂದ್ರ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತರು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ರೆಫರಲ್ ಮುಖಾಂತರ ನಗದುರಹಿತ ಆರೋಗ್ಯ ಸೇವೆಯನ್ನು ಪಡೆಯಬಹುದು ಮತ್ತು ಇದರ ಯೋಜನೆಯನ್ನು ಜೆಎಸ್‌ಎಸ್ ಆಸ್ಪತ್ರೆಯಲ್ಲಿ ಅನುಷ್ಠಾನಕ್ಕೆ ತರುತ್ತಿರುವುದು ಸಂತೋಷದ ವಿಷಯ ಎಂದರು.

ಕೇಂದ್ರ ಸರ್ಕಾರದ ಪಿಂಚಣಿದಾರರ ಸಂಘದ ಕಾರ್ಯದರ್ಶಿಗಳಾದ ಶ್ರೀ ಪಿ.ಎಂ. ಪರಮೇಶ್ವರಯ್ಯ ಮಾತನಾಡುತ್ತ ಸಿಜಿಹೆಚ್‌ಎಸ್ ಯೋಜನೆಯು ಕೇಂದ್ರ ಸರ್ಕಾರಿ ನೌಕರರಿಗೆ (ಸೇವೆಯಲ್ಲಿರುವ ಮತ್ತು ನಿವೃತ್ತ ನೌಕರರು ಮತ್ತು ಅವರ ಅವಲಂಬಿತರು) ಇವರಿಗೆ ವೈದ್ಯಕೀಯ ಸೇವೆಗಳನ್ನು ಒದಗಿಸಲು ಉದ್ದೇಶಿಸಿರುವ ಒಂದು ಯೋಜನೆಯಾಗಿದೆ. ಪ್ರಸ್ತುತ ನಗದು ರಹಿತ ಚಿಕಿತ್ಸೆಗಾಗಿ ಸಿಜಿಹೆಚ್‌ಎಸ್ ಬೆಂಗಳೂರಿನಲ್ಲಿ ಮಾತ್ರ ಆಸ್ಪತ್ರೆಗಳನ್ನು ಗುರುತಿಸಿತ್ತು. ಈಗ ಮೈಸೂರಿನ ರಾಜಕುಮಾರ್ ರಸ್ತೆಯ ಜೆಎಸ್‌ಎಸ್ ಲೇಔಟ್‌ನಲ್ಲಿ ಕ್ಲಿನಿಕ್ ಮತ್ತು ರೆಫರಲ್ ಕೇಂದ್ರವನ್ನು ಸ್ಥಾಪಿಸಿದೆ. ರೆಫರಲ್ ಮುಖಾಂತರ ಜೆಎಸ್‌ಎಸ್ ಆಸ್ಪತ್ರೆಯಲ್ಲಿ ನಗದುರಹಿತ ಚಿಕಿತ್ಸೆಯನ್ನು ಪಡೆಯಬಹುದು ಎಂದು ತಿಳಿಸಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ವೈದ್ಯಕೀಯ ಶಿಕ್ಷಣ ವಿಭಾಗದ ನಿರ್ದೇಶಕರಾದ ಶ್ರೀ ಆರ್. ಮಹೇಶ್‌ರವರು ಮಾತನಾಡಿ ಈ ಯೋಜನೆಯು ನಿವೃತ್ತ ಉದ್ಯೋಗಿಗಳಿಗೆ ಮತ್ತು ಸೇವೆಯಲ್ಲಿರುವ ಉದ್ಯೋಗಿಗಳಿಗೆ ಚಿಕಿತ್ಸೆಯನ್ನು ಒದಗಿಸುತ್ತದೆ. ಉದ್ಯೋಗಿಗಳು ಮೊದಲು ಸಿಜಿಹೆಚ್‌ಎಸ್‌ನ ಕ್ಷೇಮ ಕೇಂದ್ರವನ್ನು ಸಂಪರ್ಕಿಸಿ ರೆಫರೆನ್ಸ್ ಸ್ಲಿಪ್ ತರಬೇಕು. ನಂತರ ರೆಫರಲ್ ಲೆಟರ್ ಮೂಲಕ ಉಲ್ಲೇಖಿಸಲಾದ ಪಿಂಚಣಿದಾರರಿಗೆ ಆಸ್ಪತ್ರೆಯು ನಗದು ರಹಿತ ಸೇವೆಗಳನ್ನು ಕಡಿಮೆ ದರದಲ್ಲಿ ಒದಗಿಸುತ್ತದೆ. ಮೈಸೂರು ಪ್ರದೇಶದಲ್ಲಿ ಸುಮಾರು 20,000 ಪಿಂಚಣಿದಾರರು ಮತ್ತು 12,000 ಸೇವಾನಿರತ ಉದ್ಯೋಗಿಗಳು ಸಿಜಿಹೆಚ್‌ಎಸ್ ಯೋಜನೆಯ ವ್ಯಾಪ್ತಿಗೆ ಒಳಪಡುತ್ತಾರೆ ಎಂದರು.

ಕಾರ್ಯಕ್ರಮದಲ್ಲಿ ಡಾ. ಸಿ.ಪಿ. ಮಧು, ಡಾ. ಹೆಚ್. ಬಸವನಗೌಡಪ್ಪ, ಶ್ರೀ ಭಗವಾನ್, ಶ್ರೀ ಲೋಕೇಶ್ ಮತ್ತು ಸಿಬ್ಬಂದಿವರ್ಗದವರು ಹಾಜರಿದ್ದರು.

ಒಡೆತ್ತ ಬಲ್ಲುದು ಅವಲಕ್ಕಿಯ ಸವಿಯ
ಕೋಡುಗ ಬಲ್ಲುದೆ ಸೆಳೆಮಂಚದ ಸುಖವ
ಕಾಗೆ ನಂದನವನದೊಳಗಿದ್ದಡೇನು
ಕೋಗಿಲೆಯಾಗಬಲ್ಲುದೆ ಹೇಳಾ
ಕೊಳನ ತಡಿಯಲೊಂದು ಹೊರಸು ಕುಳ್ಳಿರ್ದಡೇನು
ಕಳಹಂಸೆಯಾಗಬಲ್ಲುದೆ
ಕೂಡಲಸಂಗಮದೇವಾ

**ಬಸವಣ್ಣ**

## ಭಾರತೀಯ ಸಂಸ್ಕೃತಿ ಸೌಹಾರ್ದತೆ ಮತ್ತು ಸಮನ್ವಯತೆಯ ಪ್ರತೀಕವಾಗಿದೆ



ಭಾರತೀಯ ಸಂಸ್ಕೃತಿಯನ್ನು ಅಲ್ಲಿನ ಪ್ರದೇಶಗಳಿಗೆ ಹೋಗಿ ಚಿಂತಿಸಬೇಕು, ಕಲ್ಪಿಸಬೇಕು. ಆಗ ಮಾತ್ರ ಭಾರತೀಯ ಸಂಸ್ಕೃತಿಯ ವೈಶಿಷ್ಟ್ಯಪೂರ್ಣವಾದ ಅನುಭವ ನಮಗಾಗಿ ಜೀವನವನ್ನು ಅರಿಯಲು ಸಾಧ್ಯ. ಭಾರತೀಯ ಸಂಸ್ಕೃತಿ ಎಂಬುದು ಸೌಹಾರ್ದತೆ ಮತ್ತು ಸಮನ್ವಯತೆಯ ಪ್ರತೀಕವಾಗಿದೆ. ಇದನ್ನು ಸರಿಯಾದ ಕ್ರಮದಲ್ಲಿ ಅರ್ಥ ಮಾಡಿಕೊಳ್ಳಬೇಕು ಎಂದು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ಮುಜಾಫರ್ ಎಚ್. ಅಸ್ಸಾದಿ ತಿಳಿಸಿದರು.

**ಮೈಸೂರಿನ ಊಟಿ ರಸ್ತೆಯಲ್ಲಿರುವ ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜಿನಲ್ಲಿ** ನಡೆದ ಸ್ನಾತಕೋತ್ತರ ವಿಭಾಗದ ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಾ ಭಾರತೀಯ ಸಂಸ್ಕೃತಿಯಲ್ಲಿ ಸೌಹಾರ್ದತೆ, ಸಮನ್ವಯತೆ, ಗುರುತಿಸುವಿಕೆ ಮತ್ತು ಸತ್ಯದ ಹುಡುಕಾಟ ಎಂಬ ನಾಲ್ಕು ಅಂಶಗಳು ಪ್ರಧಾನವಾಗಿ ಗೋಚರಿಸುತ್ತವೆ. ಭಾರತೀಯ ಸಂಸ್ಕೃತಿಯನ್ನು ಅಧ್ಯಯನ ಮಾಡುವುದರ ಮೂಲಕ ಇವುಗಳನ್ನು ಅರ್ಥ ಮಾಡಿಕೊಳ್ಳಬೇಕು. ವಚನಕಾರರು ಮತ್ತು ವಚನ ಸಾಹಿತ್ಯ ಸಾಮಾಜಿಕ ಮತ್ತು ಸಾಂಸ್ಕೃತಿಕ ಕ್ರಾಂತಿಯನ್ನೇ ಉಂಟುಮಾಡಿತು. ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ಗುರುತಿಸಿ ಸೌಹಾರ್ದತೆ, ಸಮನ್ವಯತೆಯನ್ನು ಸಾರಿತು. ಅನುಭವ ಮಂಟಪದ ಮೂಲಕ ಸತ್ಯದ ಮತ್ತು ಅನುಭಾವದ ಹುಡುಕಾಟವನ್ನು ಮಾಡಿತು. ಸೂಫಿ ಪರಂಪರೆ, ದಾಸ ಪರಂಪರೆಯು ಇದಕ್ಕೆ ಉದಾಹರಣೆಯಾಗಿವೆ. ನಮ್ಮದು ಜಗಳಗಂಟಿ ಸಂಸ್ಕೃತಿಯಲ್ಲ. ಮಾತುಕತೆ ಮತ್ತು ವಾದವಾಗ್ವಾದಗಳ ಸಂಸ್ಕೃತಿ ನಮ್ಮದು. ವಾದವಾಗ್ವಾದಗಳ ಮೂಲಕ ಆತ್ಮವಿಮರ್ಶೆ ಮಾಡುತ್ತಾ ಸತ್ಯದ ಅನ್ವೇಷಣೆ ಮಾಡುತ್ತಾ ಬಂದಿದ್ದೇವೆ. ಜಾತ್ಯತೀತರಾಗುವುದಕ್ಕೆ, ವಿಶಾಲ ಮನೋಭಾವ ಪಡೆಯುವುದಕ್ಕೆ ಭಾರತೀಯ ಸಂಸ್ಕೃತಿಯನ್ನು ಅರಿಯಬೇಕು. ವಿದ್ಯಾರ್ಥಿಗಳು ವೈಶಿಷ್ಟ್ಯಪೂರ್ಣವಾದ ಭಾರತೀಯ ಸಂಸ್ಕೃತಿಯನ್ನು ಅರ್ಥಮಾಡಿಕೊಂಡು ಜೀವನವನ್ನು ರೂಪಿಸಿಕೊಳ್ಳಿ ಎಂದು ಹೇಳಿದರು.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾಲೇಜು ಶಿಕ್ಷಣ ವಿಭಾಗದ ನಿರ್ದೇಶಕರಾದ ಪ್ರೊ. ಆರ್. ಮುಗೇಶಪ್ಪನವರು ವಿದ್ಯಾರ್ಥಿಗಳು ಪಠ್ಯಕ್ಕೆ ಒತ್ತು ನೀಡುವಂತೆ ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳಿಗೂ ಒತ್ತುನೀಡಬೇಕು. ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಗಳು ವಿದ್ಯಾರ್ಥಿಗಳ ಸೂಕ್ತ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹ ನೀಡುತ್ತಾ ಬಂದಿವೆ. ಕ್ರೀಡೆಯಿಂದ ವಿದ್ಯಾರ್ಥಿಗಳಲ್ಲಿ ಮನೋಸ್ಥೈರ್ಯ, ಶ್ರದ್ಧೆ, ಏಕಾಗ್ರತೆ, ಶಿಸ್ತು ಹೆಚ್ಚುತ್ತದೆ. ಮೊಬೈಲ್‌ನಲ್ಲಿಯೇ

ಕ್ರೀಡೆಯನ್ನು ನೋಡುವುದು ಮತ್ತು ಆಡುವ ಪ್ರವೃತ್ತಿ ಇಂದು ಹೆಚ್ಚುತ್ತಿದೆ. ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ. ಇವುಗಳಿಂದ ದೂರವಿದ್ದು ಸಾಂಸ್ಕೃತಿಕ ಮತ್ತು ಕ್ರೀಡಾ ವೇದಿಕೆಯಲ್ಲಿ ತೊಡಗಿಸಿಕೊಳ್ಳಿ ಎಂದು ತಿಳಿಸಿದರು.

ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು, ಪ್ರಾಂಶುಪಾಲರಾದ ಪ್ರೊ. ಎಂ.ಪಿ. ವಿಜಯೇಂದ್ರ ಕುಮಾರ್, ಸಾಂಸ್ಕೃತಿಕ ವೇದಿಕೆಯ ಸಂಚಾಲಕರಾದ ಡಾ. ಎಂ.ಪಿ. ಸೋಮಶೇಖರ್, ಕ್ರೀಡಾ ವೇದಿಕೆಯ ಸಂಚಾಲಕರಾದ ಶ್ರೀ ಎಂ. ಕಾರ್ತಿಕ್ ಉಪಸ್ಥಿತರಿದ್ದರು.

ದ್ವಿತೀಯ ಎಂ.ಎಸ್ಸಿ. ವಿದ್ಯಾರ್ಥಿನಿ ಕು. ಎ. ಹರ್ಷಿಣಿ ಸ್ವಾಗತಿಸಿದರು. ಕು. ಶಾಂತಿ ಮತ್ತು ಕು. ಹೆಚ್.ಎಸ್ ಹರ್ಷವರ್ಧನ್ ಪ್ರಾರ್ಥಿಸಿದರು. ದ್ವಿತೀಯ ಎಂ.ಎಸ್ಸಿ. ವಿದ್ಯಾರ್ಥಿ ಕು. ವಿ. ಶ್ರೇಯಸ್ ವಂದಿಸಿದರು. ದ್ವಿತೀಯ ಎಂ.ಎಸ್ಸಿ. ವಿದ್ಯಾರ್ಥಿನಿ ಕು. ಕೆ. ಯಶಸ್ವಿನಿ ಕಾರ್ಯಕ್ರಮ ನಿರೂಪಿಸಿದರು.

## ಅಣು ಬೋಧನಾ ಕಾರ್ಯಾಗಾರ




**ಸುತ್ತೂರಿನ ಜೆಎಸ್‌ಎಸ್ ಶಿಕ್ಷಣ ಮಹಾವಿದ್ಯಾಲಯದಲ್ಲಿ** ದಿನಾಂಕ 21.3.2023ರಂದು ಅಣು ಬೋಧನಾ ಕಾರ್ಯಾಗಾರವನ್ನು ಏರ್ಪಡಿಸಲಾಗಿತ್ತು. ಹಾಸನದ ಎನ್.ಡಿ.ಆರ್.ಕೆ. ಕಾಲೇಜಿನ ಪ್ರಾಂಶುಪಾಲರಾದ ಡಾ. ಮೋಹನ್‌ಕುಮಾರ್‌ರವರು ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಸೂಕ್ಷ್ಮ ಬೋಧನಾ ಕೌಶಲಗಳು ವಿದ್ಯಾರ್ಥಿಗಳಿಗೆ ಬೋಧನೆ ಮಾಡಲು ದಾರಿದೀಪವಿದ್ದಂತೆ, ಪಾಠ ಬೋಧನೆಯು ಉತ್ತಮ ಕೌಶಲಗಳನ್ನು ಒಳಗೊಂಡರೆ ಮಾತ್ರ ಯಶಸ್ವಿಯಾಗಲು ಸಾಧ್ಯ ಎಂದರು. ನಂತರ ಪಾಠವನ್ನು ಪರಿಚಯಿಸುವ ಕೌಶಲವನ್ನು ಪ್ರಾತ್ಯಕ್ಷಿಕೆಯ ಮೂಲಕ ಸವಿವರವಾಗಿ ನಡೆಸಿಕೊಟ್ಟರು.

ಪ್ರಾಂಶುಪಾಲರಾದ ಡಾ. ಹೆಚ್.ಎಂ. ಮಹೇಶ್‌ರವರು ಅಣುಬೋಧನೆಯು ವಿದ್ಯಾರ್ಥಿಗಳನ್ನು ಪೂರ್ಣ ಪ್ರಮಾಣದ ಶಿಕ್ಷಕರನ್ನಾಗಿ ಮಾಡುವ ಸಾಧನ ಎಂದು ಹೇಳಿ ಬೋಧನೆಗೆ ಕೌಶಲಗಳ ಜೊತೆಗೆ ತಂತ್ರಗಳನ್ನು ಬಳಸಿಕೊಂಡು ಪರಿಣಾಮಕಾರಿಯಾಗಿ ಬೋಧಿಸಲು ಇಂತಹ ಕಾರ್ಯಾಗಾರಗಳು ಸಹಕಾರಿಯಾಗಿದೆ ಎಂದರು.

ಕಾರ್ಯಾಗಾರದಲ್ಲಿ ಹಾಸನದ ಸುಜಲಾ ಪದವಿ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಕುಮಾರ್ ಹಾಗೂ ಕಾಲೇಜಿನ ಸಹಾಯಕ ಪ್ರಾಧ್ಯಾಪಕರು, ಪ್ರಥಮ ಮತ್ತು ದ್ವಿತೀಯ ವರ್ಷದ ಪ್ರಶಿಕ್ಷಣಾರ್ಥಿಗಳು ಉಪಸ್ಥಿತರಿದ್ದರು.

# ಸಮಾನತೆಗಾಗಿ ಮಹಿಳೆಯರು ನಾವಿನ್ಯತೆ ಮತ್ತು ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು



ಮಹಿಳೆಯರು ಈಗ ತಾವು ಮಾಡುತ್ತಿರುವ ಕೆಲಸದಲ್ಲಿ ಹೊಸತನ ಅಥವಾ ನಾವಿನ್ಯತೆಯನ್ನು ಮತ್ತು ತಂತ್ರಜ್ಞಾನವನ್ನು ಅಳವಡಿಸಿಕೊಂಡಾಗ ರಾಷ್ಟ್ರದ ಪ್ರಗತಿಗೆ ಕೊಡುಗೆ ನೀಡಬಹುದೆಂದು ಶಾಸಕರಾದ ಶ್ರೀ ದಿನೇಶ್ ಗುಂಡೂರಾವ್‌ರವರು ತಿಳಿಸಿದರು.

ಬೆಂಗಳೂರಿನ ಕೆ.ಪಿ. ಅಗ್ರಹಾರದ ಸರ್ಕಾರಿ ಶಾಲಾ ಆಟದ ಮೈದಾನದಲ್ಲಿ ದಿನಾಂಕ 8.3.2023ರಂದು ಶ್ರೀ ಆರ್. ಗುಂಡೂರಾವ್ ಫೌಂಡೇಷನ್ ಹಾಗೂ **ಜೆಎಸ್‌ಎಸ್ ಜನಶಿಕ್ಷಣ ಸಂಸ್ಥೆಯ** ಸಹಯೋಗದಲ್ಲಿ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಮಹಿಳೆಯರು ರಾಜಕೀಯ, ಸಾಮಾಜಿಕ, ಔದ್ಯೋಗಿಕ, ಶಿಕ್ಷಣ ಕ್ಷೇತ್ರಗಳಲ್ಲಿ ಗಣನೀಯ ಪ್ರಮಾಣದಲ್ಲಿ ಸಾಧನೆ ಮಾಡಿ ಆರ್ಥಿಕ ಪ್ರಗತಿಯನ್ನು ಹೊಂದುತ್ತಿರುವುದು ಉತ್ತಮ ಬೆಳವಣಿಗೆ. ಆಧುನಿಕ ಯುಗದಲ್ಲಿ ಮಹಿಳೆ ಕೇವಲ ನಾಲ್ಕು ಗೋಡೆಗಳ ಮಧ್ಯೆ ಅಡುಗೆ ಕೆಲಸಕ್ಕೆ ಮಾತ್ರ ಸೀಮಿತವಾಗದೆ ಸಮಾಜದ ವಿವಿಧ ಕ್ಷೇತ್ರಗಳಾದ ವಿಜ್ಞಾನ, ತಂತ್ರಜ್ಞಾನ, ಬಾಹ್ಯಾಕಾಶ, ಸಂಶೋಧನೆ, ಕೃಷಿ, ಆರೋಗ್ಯ, ಶಿಕ್ಷಣ, ಸಂವಹನ ಕ್ಷೇತ್ರಗಳಲ್ಲಿ ತನ್ನನ್ನು ತಾನು ಸಕ್ರಿಯವಾಗಿ ತೊಡಗಿಸಿಕೊಂಡು ಯಶಸ್ವಿಯಾಗುತ್ತಿರುವುದು ಶ್ಲಾಘನೀಯ ವಿಚಾರ ಎಂದು ಹೇಳಿದರು.

ಜೆಎಸ್‌ಎಸ್ ಜನಶಿಕ್ಷಣ ಸಂಸ್ಥೆಯ ವತಿಯಿಂದ ತರಬೇತಿ ಪಡೆದ ಕಲಿಕಾರ್ಥಿಗಳು ತಯಾರಿಸಿದ ವಸ್ತುಗಳ ಪ್ರದರ್ಶನವನ್ನು ಉದ್ಘಾಟಿಸಿದ ಜೆಎಸ್‌ಎಸ್ ಜನ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಎಂ.ಬಿ. ದ್ಯಾಬೇರಿ 1909ರಲ್ಲಿ ಅಮೆರಿಕದ ರಾಜಕೀಯ ಪಕ್ಷವು ನ್ಯೂಯಾರ್ಕ್ ನಗರದಲ್ಲಿ ಕಡಿಮೆ ವೇತನ ಶ್ರೇಣಿ, ಸಮಾನ ಅವಕಾಶಗಳು ಮತ್ತು ಮತದಾನದ ಹಕ್ಕುಗಳ ಕೊರತೆಯಂತಹ ವಿವಿಧ ಸಮಸ್ಯೆಗಳ ವಿರುದ್ಧ ಹದಿನೈದು ಸಾವಿರ ಮಹಿಳೆಯರು ಪ್ರತಿಭಟಿಸಿದ ದಿನವನ್ನು ರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನಾಗಿ ಮಾರ್ಚ್ 8ರಂದು ಆಚರಿಸುತ್ತಿದ್ದು, 1996 ರಿಂದ ಈ ದಿನವನ್ನು ವಿಶ್ವಸಂಸ್ಥೆಯು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಾಗಿ ಆಚರಿಸಲು ಘೋಷಣೆ ಮಾಡಿದೆ. ಮಹಿಳೆ ಮತ್ತು ಪುರುಷರಿಗೆ ಕಾನೂನಿನಲ್ಲಿ ಸಮಾನ ಅವಕಾಶಗಳಿದ್ದು, ಯಾವುದೇ ಲಿಂಗ ತಾರತಮ್ಯ, ಶೋಷಣೆ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದರಿಂದ ಮಹಿಳೆಯರು ನಿರ್ಭೀತಿಯಿಂದ ಜೀವಿಸಬಹುದು. ಮಹಿಳೆಯರು ಉದ್ದಿಮೆಗಳನ್ನು ಪ್ರಾರಂಭಿಸಲು ಸರ್ಕಾರಗಳು ಅನೇಕ ರಿಯಾಯಿತಿಗಳನ್ನು ನೀಡುತ್ತಿದೆ. ಈ ಸೌಲಭ್ಯಗಳನ್ನು ಪಡೆದುಕೊಂಡು ಉದ್ದಿಮೆ ಸ್ಥಾಪಿಸಿ ಅನೇಕ ಮಹಿಳೆಯರಿಗೆ ಉದ್ಯೋಗ ಕಲ್ಪಿಸಿ ಮಹಿಳಾ ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಲು ಕರೆ ನೀಡಿದರು.

ಜೆಎಸ್‌ಎಸ್ ಜನಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು ಹಾಗೂ ನಿವೃತ್ತ ನ್ಯಾಯಾಧೀಶರಾದ ಶ್ರೀ ಮಹದೇವಯ್ಯರವರು, ಭಾರತದ ಸಂವಿಧಾನದಲ್ಲಿ ಮಹಿಳೆಯರಿಗೆ ಮೀಸಲಾತಿ ಕಲ್ಪಿಸಿ ಕೊಟ್ಟಿರುವುದರಿಂದ ರಾಜಕೀಯ ಕ್ಷೇತ್ರದಲ್ಲಿ ಮತ್ತು ನ್ಯಾಯಾಂಗ ಇಲಾಖೆಗಳಲ್ಲಿ

ಹೆಚ್ಚು ಹೆಚ್ಚು ಮಹಿಳೆಯರು ಸಕ್ರಿಯವಾಗಿ ಪಾಲ್ಗೊಳ್ಳುತ್ತಿರುವುದು ಸಂತಸದ ವಿಚಾರ. ಕಾನೂನಿನಲ್ಲಿ ಮಹಿಳೆಯರಿಗೆ ರಕ್ಷಣೆಯಿದ್ದು, ಕಾನೂನಿನ ಚೌಕಟ್ಟಿನಲ್ಲಿ ಯಾವುದೇ ಕೆಲಸವನ್ನು ನಿರ್ವಹಿಸಲು ಸ್ವತಂತ್ರಳಾಗಿದ್ದಾಳೆ ಎಂದರು.

ಶ್ರೀ ಆರ್. ಗುಂಡೂರಾವ್ ಫೌಂಡೇಷನ್ ಸಂಸ್ಥಾಪಕರಾದ ಶ್ರೀಮತಿ ತಬು ದಿನೇಶ್‌ರಾವ್ ಮಹಿಳಾ ಸಾಧಕಿ ಪುರಸ್ಕಾರ ಸ್ವೀಕರಿಸಿ ಮಾತನಾಡುತ್ತಾ, ಮಹಿಳೆಯರಿಗೆ ಹೆಚ್ಚಿನ ಅವಕಾಶಗಳು, ಸೌಲಭ್ಯಗಳು, ಪ್ರೋತ್ಸಾಹ ಸಿಗುತ್ತಿರುವುದರಿಂದ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಅನುಕೂಲವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ವೃತ್ತಿಬೋಧಕರಿಗೆ ಮತ್ತು ಕಲಿಕಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿದ್ದು, ವಿಜೇತರಾದ 89 ಜನರಿಗೆ ಬಹುಮಾನಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಬಿಬಿಎಂಪಿ ಮಾಜಿ ಸದಸ್ಯರಾದ ಶ್ರೀಮತಿ ವಿದ್ಯಾ ಶಶಿಕುಮಾರ್, ಜನ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಶ್ರೀಮತಿ ಡಿ.ಎಂ. ಶಶಿಕಲಾ, ಮುಖಂಡರಾದ ಶ್ರೀ ಶಶಿಕುಮಾರ್, ಶ್ರೀಮತಿ ದೇವಿ, ಶ್ರೀ ಸುಧಾಕರ್ ಆಡಪ್ಪ, ಶ್ರೀ ಆರೋಗ್ಯದಾಸ್, ಶ್ರೀಮತಿ ರಾಜೇಶ್ವರಿ, ಶ್ರೀ ಚಂದ್ರಪ್ಪ, ಶ್ರೀ ಅಸ್ಲಂ ಪಾಷ, ವೃತ್ತಿಬೋಧಕರು, ಕಲಿಕಾರ್ಥಿಗಳು ಭಾಗವಹಿಸಿದ್ದರು.

## ಜಸ್ಟಿಸ್‌ನಿಂದ ಮಾರ್ಗದರ್ಶಿ ಕಾರ್ಯಕ್ರಮ



**ಬೆಂಗಳೂರಿನ ಜಯನಗರದ ಜೆಎಸ್‌ಎಸ್ ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ಸಂಸ್ಥೆಯ ವತಿಯಿಂದ** ದಿನಾಂಕ 8.3.2023ರಂದು ಕೃಪಾನಿಧಿ ಶಿಕ್ಷಣ ಸಂಸ್ಥೆಗಳ ಸಮೂಹದಲ್ಲಿ ಪ್ರಥಮ ಹಾಗೂ ದ್ವಿತೀಯ ಸಾಲಿನ ಸುಮಾರು 500ಕ್ಕೂ ಹೆಚ್ಚು ಸ್ನಾತಕೋತ್ತರ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಐಎಎಸ್ ಮತ್ತು ಕೆಎಎಸ್ ಪೂರ್ವಭಾವಿ ಮತ್ತು ಮುಖ್ಯಪರೀಕ್ಷೆ ತರಬೇತಿಯ ಬಗ್ಗೆ ಒರಿಯೆಂಟೇಷನ್ ಕಾರ್ಯಕ್ರಮವನ್ನು ನಡೆಸಲಾಯಿತು.

ಈ ಕಾರ್ಯಕ್ರಮದಲ್ಲಿ ಪದವಿ ಮತ್ತು ಸ್ನಾತಕೋತ್ತರ ಪದವಿ ಪೂರೈಸಿದ ನಂತರ ಭಾರತೀಯ ಆಡಳಿತ ಸೇವೆ ಮತ್ತು ಕರ್ನಾಟಕ ಆಡಳಿತ ಸೇವೆಗಾಗಿ ಪೂರ್ವಭಾವಿ ಮತ್ತು ಮುಖ್ಯಪರೀಕ್ಷೆಗೆ ಯಾವ ರೀತಿ ಸಿದ್ಧತೆ ಮಾಡಿಕೊಳ್ಳಬೇಕು, ಪ್ರಚಲಿತ ವಿದ್ಯಮಾನಗಳು, ಟೆಸ್ಟ್ ಸಿರೀಸ್, ಕೋಚಿಂಗ್ ಇತ್ಯಾದಿಗಳ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಜಸ್ಟೀಸ್‌ನ ಗೌರವ ನಿರ್ದೇಶಕರು, ನಿವೃತ್ತ ಐಎಎಸ್ ಅಧಿಕಾರಿಗಳಾದ ಶ್ರೀ ಎಂ.ಬಿ. ದ್ಯಾಬೇರಿ, ಸಂಯೋಜನಾಧಿಕಾರಿಗಳಾದ ಶ್ರೀ ಎಸ್. ಲೋಲಕುಮಾರ್ ಮತ್ತು ಮೆಂಟರ್ ಶ್ರೀ ಭಾನು ಜೋಶಿ ತಿಳಿಸಿಕೊಟ್ಟರು. ಕೃಪಾನಿಧಿ ಶಿಕ್ಷಣ ಸಂಸ್ಥೆಗಳ ಡೀನ್ ಡಾ. ರಾಜೇಂದ್ರ ಪ್ರಸಾದ್, ಪ್ರಾಂಶುಪಾಲರಾದ ಡಾ. ಎಸ್. ಬದ್ರುನಿಸ್ಸಾ ಪಾಲ್ಗೊಂಡಿದ್ದರು.

## ಮಹಿಳೆಯರು ಸಮಾಜದ ನಿಜವಾದ ವಾಸ್ತು ಶಿಲ್ಪಿಗಳು



ಮೈಸೂರಿನ ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್‌ನಲ್ಲಿ ಪ್ರಾಂಶುಪಾಲರಾದ ಶ್ರೀಮತಿ ಡಿ.ಎನ್. ರೇಣುಕಾದೇವಿಯವರು ಜ್ಯೋತಿ ಬೆಳಗಿಸುವುದರ ಮೂಲಕ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗು ಜನಾಂಗೀಯ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

**ಮೈಸೂರಿನ ಜೆಎಸ್‌ಎಸ್ ಸ್ಕೂಲ್ ಆಫ್ ನರ್ಸಿಂಗ್** ವತಿಯಿಂದ ದಿನಾಂಕ 25.3.2023ರಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗು ಜನಾಂಗೀಯ ದಿನವನ್ನು ಆಚರಿಸಲಾಯಿತು.

ಪ್ರಾಂಶುಪಾಲರಾದ ಶ್ರೀಮತಿ ಡಿ.ಎನ್. ರೇಣುಕಾದೇವಿರವರು ಮಾತನಾಡಿ ಈ ವರ್ಷದ ಘೋಷಣಾ ವಾಕ್ಯವಾದ ಲಿಂಗ ಸಮಾನತೆಗಾಗಿ ನಾವಿನ್ಯತೆ ಮತ್ತು ತಂತ್ರಜ್ಞಾನ ಎಂಬುದರ ಬಗ್ಗೆ ಸವಿಸ್ತಾರವಾಗಿ ವಿವರಿಸಿ ಪ್ರತಿಯೊಬ್ಬ ಹೆಣ್ಣು ಮಗಳ ಜೀವನದಲ್ಲಿ ತಾಯಿಯ ಪಾತ್ರ ಮಹತ್ತರವಾದದ್ದು. ನನಗೆ ನನ್ನ ತಾಯಿ ನೀಡಿದ ಮಾರ್ಗದರ್ಶನ, ಪ್ರೋತ್ಸಾಹ ಹಾಗು ತ್ಯಾಗ ಅಪಾರವಾದುದು. ಮಹಿಳಾ ದಿನಾಚರಣೆಯ ಮುಖ್ಯ ಉದ್ದೇಶ ಲಿಂಗ ಸಮಾನತೆಯನ್ನು ಎತ್ತಿ ಹಿಡಿಯುವುದು, ಜೊತೆಗೆ ಮಹಿಳಾ ಸಬಲೀಕರಣಕ್ಕೆ ಹೆಚ್ಚು ಒತ್ತು ನೀಡಿವುದಾಗಿದೆ. ಲಿಂಗ ಸಮಾನತೆಯನ್ನು ಆಚರಿಸುವ ಮಹಿಳೆಯರ ಸಾಧನೆಗಳನ್ನು ಈ ದಿನದಂದು ಆಚರಿಸಲಾಗುತ್ತದೆ. ಮಹಿಳಾ ದಿನವನ್ನು ಒಂದೇ ದಿನಕ್ಕೆ ಸೀಮಿತಗೊಳಿಸಲು ಖಂಡಿತಾ ಸಾಧ್ಯವಿಲ್ಲ. ಮನೆ, ಕುಟುಂಬ, ಕಛೇರಿ, ಮಕ್ಕಳ ಕೆಲಸ ಹೀಗೆ ಎಲ್ಲವನ್ನೂ ಸಮರ್ಥವಾಗಿ ನಿಭಾಯಿಸುವ ಹೆಣ್ಣಿನ ಶಕ್ತಿಗೆ ಅದರದ್ದೇ ಆದ ಮಹತ್ವವಿದೆ. ಮಹಿಳೆಯರು ಸಮಾಜದ ನಿಜವಾದ ವಾಸ್ತು ಶಿಲ್ಪಿಗಳು ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಅಂತರ ತರಗತಿ ವಿದ್ಯಾರ್ಥಿಗಳಿಗೆ ಈ ವರ್ಷದ ಘೋಷಣ ವಾಕ್ಯದ ಬಗ್ಗೆ ಭಾಷಣ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು. ಸ್ಪರ್ಧೆಯಲ್ಲಿ ಕು. ಅಮೃತ ಮೊದಲನೇ, ಕು. ಟೆನ್ಸಿನ್ ಸುಮೊ ಎರಡನೇ, ಕು. ಕೆ.ಎಂ. ಪಲ್ಲವಿ ಮೂರನೇ ಹಾಗು ಕು. ಡುಂಕಿ ಸಮಾಧಾನಕರ ಬಹುಮಾನವನ್ನು ಪಡೆದುಕೊಂಡಿರುತ್ತಾರೆ. ಶಾಲೆಯ ಹಿರಿಯ ನರ್ಸಿಂಗ್ ಟ್ಯೂಟರಾದ ಶ್ರೀ ಆರ್.ಕೆ. ಮಹದೇವಸ್ವಾಮಿರವರು ಹಾಗು ನರ್ಸಿಂಗ್ ಟ್ಯೂಟರಾದ ಶ್ರೀಮತಿ ಹೆಚ್.ಎಸ್. ಮಾನಸ ತೀರ್ಪುಗಾರರಾಗಿದ್ದರು. ಇದೇ ಸಂದರ್ಭದಲ್ಲಿ ಉತ್ತಮ ಜನಾಂಗೀಯ ಉಡುಗೆ ಧರಿಸಿದ ವಿದ್ಯಾರ್ಥಿಗಳನ್ನು ಆಯ್ಕೆಮಾಡಿ ಬಹುಮಾನವನ್ನು ಘೋಷಿಸಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಬೋಧಕ ಮತ್ತು ಬೋಧಕೇತರ ವೃಂದದವರು ಹಾಗು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಡಾ. ಪ್ರಸನ್ನ ಸಂತೇಕಡೂರುರವರಿಗೆ ಸರ್ ಸಿ.ವಿ. ರಾಮನ್ ಯುವ ವಿಜ್ಞಾನಿ ಪ್ರಶಸ್ತಿ




**ಮೈಸೂರಿನ ಜೆಎಸ್‌ಎಸ್ ವೈದ್ಯಕೀಯ ಮಹಾವಿದ್ಯಾಲಯದ** ಸಹ ಪ್ರಾಧ್ಯಾಪಕ, ವಿಜ್ಞಾನಿ ಮತ್ತು ಲೇಖಕರಾದ ಡಾ. ಪ್ರಸನ್ನ ಸಂತೇಕಡೂರುರವರು ಕರ್ನಾಟಕ ಸರ್ಕಾರದ ಪ್ರತಿಷ್ಠಿತ ಸರ್ ಸಿ.ವಿ. ರಾಮನ್ ಯುವ ವಿಜ್ಞಾನಿ ರಾಜ್ಯ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯು ವೈದ್ಯಕೀಯ ವಿಜ್ಞಾನ ಕ್ಷೇತ್ರಕ್ಕೆ ಅದರಲ್ಲೂ ಲಿವರ್ ಕ್ಯಾನ್ಸರ್ ಕುರಿತ ಪ್ರಸನ್ನ ಅವರ ಸಂಶೋಧನೆ ಮತ್ತು ಪ್ರಮುಖ ಕೊಡುಗೆಯನ್ನು ಗುರುತಿಸಿ ಈ ಪ್ರಶಸ್ತಿಯನ್ನು ನೀಡಿದೆ. ಭಾರತ ರತ್ನ ಡಾ. ಸಿ.ಎನ್.ಆರ್. ರಾವ್, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಮಾಜಿ ಅಧ್ಯಕ್ಷರಾದ ಎ.ಎಸ್. ಕಿರಣ್ ಕುಮಾರ್, ಭಾರತೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕರಾದ ಡಾ. ಗೋವಿಂದನ್ ರಂಗರಾಜನ್, ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಕಾರ್ಯದರ್ಶಿಗಳಾದ ಡಾ. ಅಶೋಕ್ ರಾಯಚೂರು ಹಾಗೂ ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರಾದ ಡಾ. ಅಶ್ವಥ್ ನಾರಾಯಣ ಅವರ ಸಮ್ಮುಖದಲ್ಲಿ ಭಾರತೀಯ ವಿಜ್ಞಾನ ಮಂದಿರದ ಜೆ.ಎನ್. ಟಾಟಾ ಸಭಾಂಗಣದಲ್ಲಿ ಈ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಡಾ. ಪ್ರಸನ್ನರವರು ಕಳೆದ ಇಪ್ಪತ್ತು ವರ್ಷಗಳಿಂದ ಕ್ಯಾನ್ಸರ್ ಅದರಲ್ಲೂ ಲಿವರ್ ಕ್ಯಾನ್ಸರಿಗೆ ಸಂಬಂಧಪಟ್ಟ ಹಲವಾರು ಮಹತ್ತರವಾದ ಲೇಖನಗಳನ್ನು ಪ್ರಕಟಿಸಿ ಅಮೆರಿಕಾದಲ್ಲಿ ನೆಲೆಸಿರುವ ಭಾರತೀಯ ಮೂಲದ ಕ್ಯಾನ್ಸರ್ ವಿಜ್ಞಾನಿಗಳ ಒಕ್ಕೂಟದಿಂದ ಯುವ ವಿಜ್ಞಾನಿ ಪ್ರಶಸ್ತಿ, ಅಮೆರಿಕಾದ ಕ್ಯಾನ್ಸರ್ ಅಸೋಸಿಯೇಷನ್‌ನಿಂದ ಸ್ಕಾಲರ್ ಇನ್ ಟ್ರೈನಿಂಗ್ ಪ್ರಶಸ್ತಿ, ಮ್ಯಾಸ್ಸಿ ಕ್ಯಾನ್ಸರ್ ಸೆಂಟರಿನಿಂದ ಎಕ್ಸೆಲೆನ್ಸ್ ಇನ್ ಕ್ಯಾನ್ಸರ್ ರಿಸರ್ಚ್ ಅವಾರ್ಡ್ ಪಡೆದಿರುತ್ತಾರೆ. ಸುಮಾರು ಹತ್ತು ವರ್ಷಗಳ ಕಾಲ ಅಮೆರಿಕದಲ್ಲಿ ನೆಲೆಸಿದ್ದ ಪ್ರಸನ್ನರವರು ಭಾರತ ಸರ್ಕಾರದ ಜೈವಿಕ ತಂತ್ರಜ್ಞಾನ ಇಲಾಖೆಯಿಂದ ವಿದೇಶಗಳಲ್ಲಿರುವ ಭಾರತೀಯ ಪ್ರತಿಭಾವಂತ ವಿಜ್ಞಾನಿಗಳಿಗೆ ಕೊಡಲ್ಪಡುವ ಹೆಸರಾಂತ ರಾಮಲಿಂಗಸ್ವಾಮಿ ಫೆಲೋಶಿಪನ್ನು ಪಡೆದು ಮಾತೃಭೂಮಿಗೆ ಹಿಂತಿರುಗಿ ತಮ್ಮ ಸಂಶೋಧನೆಯನ್ನು ಮುಂದುವರಿಸಿದ್ದಾರೆ. ಪ್ರಸ್ತುತ ಮೈಸೂರಿನ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ ವೈದ್ಯಕೀಯ ಮಹಾವಿದ್ಯಾಲಯದ ಸೆಂಟರ್ ಆಫ್ ಎಕ್ಸೆಲೆನ್ಸ್ ಇನ್ ಮಾಲಿಕ್ಯುಲರ್ ಬಯಾಲಜಿ ಅಂಡ್ ರಿಜೆನೆರೇಟಿವ್ ಮೆಡಿಸಿನ್ ಮತ್ತು ಜೀವರಸಾಯನ ಶಾಸ್ತ್ರ ವಿಭಾಗದಲ್ಲಿ ಸಹ ಪ್ರಾಧ್ಯಾಪಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಲಿವರ್ ಕ್ಯಾನ್ಸರ್ ಕುರಿತು ಇವರು "ಸು" ಎಂಬ ಕಾದಂಬರಿ ರಚಿಸಿದ್ದು ಮಲಯಾಳಂ ಭಾಷೆಗೆ ಅನುವಾದಗೊಂಡಿದೆ.

# ಮಾದಕ ವ್ಯಸನಗಳ ಬಗ್ಗೆ ಅರಿವು



ನಂಜನಗೂಡಿನ ಜೆಎಸ್‌ಎಸ್ ಪಾಲಿಟೆಕ್ನಿಕ್ ಮತ್ತು ಮೈಸೂರಿನ ಜೆಎಸ್‌ಎಸ್ ಆಪ್ತ ಸಮಾಲೋಚನಾ ಕೇಂದ್ರಗಳ ಸಂಯುಕ್ತಾಶ್ರಯದಲ್ಲಿ 'ಮಾದಕ ವ್ಯಸನಗಳ ಬಗ್ಗೆ ಅರಿವು' ಕಾರ್ಯಕ್ರಮವನ್ನು ಚುಂಚನಹಳ್ಳಿ ಶ್ರೀಗಳವರ ಸಮ್ಮುಖದಲ್ಲಿ ಉದ್ಘಾಟಿಸುತ್ತಿರುವುದು

**ನಂಜನಗೂಡಿನ ಜೆಎಸ್‌ಎಸ್ ಪಾಲಿಟೆಕ್ನಿಕ್ ಹಾಗೂ ಮೈಸೂರಿನ ಜೆಎಸ್‌ಎಸ್ ಆಪ್ತಸಮಾಲೋಚನ ಕೇಂದ್ರದ ಸಂಯುಕ್ತಾಶ್ರಯದಲ್ಲಿ** ದಿನಾಂಕ 4.3.2023ರಂದು ಮಾದಕ ವ್ಯಸನಗಳ ಬಗ್ಗೆ ಅರಿವು ಕಾರ್ಯಕ್ರಮವನ್ನು ನಂಜನಗೂಡಿನ ಸುತ್ತೂರು ಜಗದ್ಗುರು ಶ್ರೀ ಶಿವರಾತ್ರೀಶ್ವರ ಮಂಗಳ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಪ್ರಥಮ ದರ್ಜೆ ಗುತ್ತಿಗೆದಾರರಾದ ಶ್ರೀ ಯು.ಎನ್. ಪದ್ಮನಾಭರಾವ್‌ರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಪ್ರತಿ ಮನೆ ಮನೆಗಳಿಂದ ಆರಂಭವಾಗಬೇಕು ಎಂದು ತಿಳಿಸಿದರು. ವಕೀಲರಾದ ಶ್ರೀ ಬಿ. ನಂಜುಂಡಸ್ವಾಮಿ ಮಾತನಾಡಿ ಮನೆಗಳಲ್ಲಿ ಪೋಷಕರು ಧೂಮಪಾನ, ಮದ್ಯಪಾನ ಮಾಡುವುದನ್ನು ನಿಯಂತ್ರಣ ಮಾಡಿ ಮಕ್ಕಳ ಮೇಲೆ ಪ್ರೀತಿ ವಾತ್ಸಲ್ಯವನ್ನು ಬೆಳೆಸಿಕೊಳ್ಳುವ ಮುಖಾಂತರ ಮಕ್ಕಳು ಮಾದಕ ವಸ್ತುಗಳ ಸೇವನೆಯಿಂದ ದೂರ ಇರುವಂತೆ ಗಮನವಿಡುವುದರಿಂದ ವಾಹನ ಚಲಾವಣೆಯಿಂದ ಅಪಘಾತಗಳು ಹಾಗೂ ಆತ್ಮಹತ್ಯೆಯಂತಹ ಪ್ರಕರಣಗಳನ್ನು ತಡೆಯಬಹುದು. ಮಹಿಳೆ ಮತ್ತು ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ಪ್ರಕರಣಗಳನ್ನು ಸಹ ನಿಯಂತ್ರಿಸಬಹುದು ಹಾಗೂ ಸ್ವಸ್ಥ ಸಮಾಜವನ್ನು ನಿರ್ಮಿಸಬಹುದು ಎಂದು ತಿಳಿಸಿದರು.

ಜೆಎಸ್‌ಎಸ್ ಆಸ್ಪತ್ರೆಯ ಮನೋರೋಗ ತಜ್ಞರಾದ ಡಾ. ಮೇಘ ಸದಾಶಿವರವರು ಮಹಾತ್ಮ ಗಾಂಧೀಜಿಯವರು 1920ರಲ್ಲಿ ರೂಪಿಸಿದ ತಮ್ಮ ರಚನಾತ್ಮಕ ಸಾಮಾಜಿಕ ಚಳುವಳಿಯಲ್ಲಿ ಮಾದಕ ವಸ್ತುಗಳ ಸೇವನೆಯ ದುಷ್ಪರಿಣಾಮಗಳ ಬಗ್ಗೆ ತಿಳಿಸಿದ್ದರು. ಆದರೆ ಇಂದಿಗೂ ಸಹ ಈ ಸಮಸ್ಯೆ ಬಗೆಹರಿದಿಲ್ಲ. ಆತ್ಮಬಲದೊಂದಿಗೆ ಆತ್ಮಶುದ್ಧಿ ಹೊಂದಿದ್ದರೆ ಮಾದಕ ವಸ್ತುಗಳ ಪ್ರಭಾವಕ್ಕೆ ಒಳಗಾಗಲು ಸಾಧ್ಯವಿಲ್ಲ. ವೈದ್ಯಕೀಯ ಉಪಯೋಗಕ್ಕೆ ಮಾತ್ರವಲ್ಲದೆ ಇತರ ಉದ್ದೇಶಕ್ಕೆ ಮಾದಕ ವಸ್ತುಗಳ ಬಳಕೆ ಸಲ್ಲದು ಎಂಬ ಸಂವಿಧಾನದ ಆಶಯ ಪಾಲಿಸಬೇಕು ಎಂದು ತಿಳಿಸಿದರು.

ಜೆಎಸ್‌ಎಸ್ ಆಪ್ತಸಮಾಲೋಚನ ಕೇಂದ್ರ ನಡೆಸುವ ಮಾದಕ ವ್ಯಸನ ನಿರ್ಮೂಲನ ಶಿಬಿರಗಳಲ್ಲಿ ಭಾಗವಹಿಸಿ ಮಾದಕ ವ್ಯಸನಗಳಿಂದ ಮುಕ್ತರಾದ ಕೆಲವರು ಈ

ಸಭೆಯಲ್ಲಿ ಮಾತನಾಡಿ, ಈಗ ಸಂತೋಷದಾಯಕ ಜೀವನ ನಡೆಸುತ್ತಿರುವ ಬಗ್ಗೆ ತಮ್ಮ ಅನುಭವಗಳನ್ನು ವಿದ್ಯಾರ್ಥಿಗಳ ಜೊತೆ ಹಂಚಿಕೊಂಡರು.

ಚುಂಚನಹಳ್ಳಿ ಹಾಗೂ ನವಿಲೂರು ಮಠಾಧ್ಯಕ್ಷರಾದ ಶ್ರೀ ಚನ್ನಬಸವ ಸ್ವಾಮಿಗಳು ಸಮ್ಮುಖ ವಹಿಸಿದ್ದರು. ಡಾ. ಎಂ.ಪಿ. ಸೋಮಶೇಖರ್ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಂಶುಪಾಲರಾದ ಶ್ರೀ ಎನ್. ವಿದ್ಯಾಶಂಕರ್ ಅಧ್ಯಕ್ಷತೆ ವಹಿಸಿದ್ದರು. ಶ್ರೀ ಜಿ. ಪ್ರಭುಪ್ರಸಾದ್ ವಂದಿಸಿದರು.

## ಫೈನ್ ಟ್ಯೂನಿಂಗ್ ಕಾರ್ಯಾಗಾರ



**ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗ** ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಹಯೋಗದೊಂದಿಗೆ ಜೆಎಸ್‌ಎಸ್ ಸಂಸ್ಥೆಯ ವಿವಿಧ ಶಾಲೆಗಳಲ್ಲಿ 2023ರ ಎಸ್‌ಎಸ್‌ಎಲ್‌ಸಿ ಪೂರ್ವಭಾವಿ ಪರೀಕ್ಷೆಯಲ್ಲಿ 600ಕ್ಕೂ ಹೆಚ್ಚು ಅಂಕ ಗಳಿಸಿರುವ ವಿದ್ಯಾರ್ಥಿಗಳಿಗೆ ಗುಣಮಟ್ಟದ ಫಲಿತಾಂಶಕ್ಕಾಗಿ 3 ದಿನಗಳ ಫೈನ್ ಟ್ಯೂನಿಂಗ್ ಕಾರ್ಯಾಗಾರವನ್ನು ದಿನಾಂಕ 13.3.2023 ರಿಂದ 15.3.2023ರವರೆಗೆ ಲಕ್ಷ್ಮೀಪುರಂನ ಜೆಎಸ್‌ಎಸ್ ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿತ್ತು.

ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಮೈಸೂರು ಡಯಟ್‌ನ ಹಿರಿಯ ಉಪನ್ಯಾಸಕರಾದ ಶ್ರೀ ಅಮಿತ್‌ರವರು ಪ್ರಸ್ತುತ ಸಂದರ್ಭದಲ್ಲಿ ಗುಣಾತ್ಮಕ ಶಿಕ್ಷಣದ ಅವಶ್ಯಕತೆಯ ಬಗ್ಗೆ ಮಾಹಿತಿ ನೀಡಿದರು.

ಪ್ರಾಸ್ತಾವಿಕ ನುಡಿಗಳನ್ನಾಡಿದ ಶಾಲಾ ಶಿಕ್ಷಣ ವಿಭಾಗದ ವಿಷಯ ಪರಿವೀಕ್ಷಕರಾದ ಶ್ರೀ ನಾಗರಾಜುರವರು ವಿದ್ಯಾರ್ಥಿಗಳು ಕಾರ್ಯಾಗಾರದ ಆಶಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದರು. ಈ ಸಂದರ್ಭದಲ್ಲಿ ಲಕ್ಷ್ಮೀಪುರಂ ಪ್ರೌಢಶಾಲೆಯ ಮುಖ್ಯ ಶಿಕ್ಷಕರು ಮತ್ತು ಜೆಎಸ್‌ಎಸ್ ಮಹಾವಿದ್ಯಾಪೀಠದ ಶಾಲಾ ಶಿಕ್ಷಣ ವಿಭಾಗದ ಅಧಿಕಾರಿ ವೃಂದದವರು ಉಪಸ್ಥಿತರಿದ್ದರು.

ಮೊದಲನೆಯ ದಿನದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ನಿವೃತ್ತ ಶಿಕ್ಷಕರಾದ ಶ್ರೀ ರವೀಶ್‌ಕುಮಾರ್ ಮತ್ತು ಶ್ರೀ ಬಾಲಕೃಷ್ಣಯ್ಯರವರು ಕನ್ನಡದಲ್ಲಿ ಉತ್ತಮ ಅಂಕಗಳನ್ನು ಗಳಿಸುವ ಬಗ್ಗೆ ಪಠ್ಯ ಪುಸ್ತಕದ ವಿಷಯಾಂಶಗಳನ್ನು ಅನೇಕ ಉದಾಹರಣೆಗಳ ಮೂಲಕ ಚರ್ಚಿಸಿದರು.

## ಸುತ್ತೂರು ಜೆಎಸ್‌ಎಸ್ ಶಾಲೆ ಹಾಗೂ ಉಚಿತ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಅರ್ಜಿ ಆಹ್ವಾನ




**ಸುತ್ತೂರು ಶ್ರೀಕ್ಷೇತ್ರದ ಜೆಎಸ್‌ಎಸ್ ಶಾಲೆ** ಹಾಗೂ ಉಚಿತ ವಿದ್ಯಾರ್ಥಿನಿಲಯದ 2023-24ನೇ ಸಾಲಿನ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಕನ್ನಡ ಮಾಧ್ಯಮಕ್ಕೆ 1 ರಿಂದ 8ನೇ ತರಗತಿವರೆಗೆ ಮತ್ತು ಇಂಗ್ಲೀಷ್ ಮಾಧ್ಯಮಕ್ಕೆ 1, 2, 5 ಹಾಗೂ 8ನೇ ತರಗತಿಗಳಿಗೆ ಮಾತ್ರ ಪ್ರವೇಶಕ್ಕೆ ಅವಕಾಶವಿದೆ. ಗ್ರಾಮಾಂತರ ಪ್ರದೇಶದ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಬಾಲಕ ಹಾಗೂ ಬಾಲಕಿಯರಿಗೆ ಪ್ರವೇಶ ನೀಡಲಾಗುವುದು.

ಅರ್ಜಿಯನ್ನು ಶಾಲಾ ಕಛೇರಿಯಲ್ಲಿ ಖುದ್ದಾಗಿ ಪಡೆಯಬಹುದು ಅಥವಾ www.jssschoolsuttur.org ಹಾಗೂ www.jssonline.org ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು. ದೂರವಾಣಿಯಲ್ಲಿ ಸಂಪರ್ಕಿಸಿದರೆ ವಾಟ್ಸ್‌ಆ್ಯಪ್ ಮೂಲಕವೂ ಅರ್ಜಿ ನಮೂನೆಯನ್ನು ಕಳುಹಿಸಿಕೊಡಲಾಗುವುದು. ಅಂಚೆ ಮುಖಾಂತರ ಅರ್ಜಿ ಪಡೆಯಲು ಇಚ್ಛಿಸುವವರು, ವಿದ್ಯಾರ್ಥಿಯು ಪ್ರವೇಶ ಬಯಸುವ ತರಗತಿಯ ವಿವರ ಹಾಗೂ ಸ್ವ-ವಿಳಾಸವುಳ್ಳ 5 ರೂ.ಗಳ ಪೋಸ್ಟಲ್ ಸ್ಟ್ಯಾಂಪ್ ಹಚ್ಚಿದ ಲಕೋಟೆಯನ್ನು ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು-571129, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ. ಈ ವಿಳಾಸಕ್ಕೆ ಕಳುಹಿಸಿ ಪಡೆಯಬಹುದು. ಭರ್ತಿ ಮಾಡಿದ ಅರ್ಜಿಗಳನ್ನು ಮೇ 13ರ ಒಳಗಾಗಿ ಸಲ್ಲಿಸಬೇಕು.

ಭರ್ತಿ ಮಾಡಿದ ಅರ್ಜಿಯ ಜೊತೆಗೆ ಹಿಂದಿನ ತರಗತಿಯ ಅಂಕಪಟ್ಟಿ, ಭಾವಚಿತ್ರ, ವಿದ್ಯಾರ್ಥಿ ಮತ್ತು ಪೋಷಕರ ಆಧಾರ್‌ಕಾರ್ಡ್, ರೇಷನ್‌ಕಾರ್ಡ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಅಂಚೆ ಮುಖಾಂತರ ಆಡಳಿತಾಧಿಕಾರಿಗಳು, ಜೆಎಸ್‌ಎಸ್ ಸಂಸ್ಥೆಗಳು, ಸುತ್ತೂರು 571129, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಈ ವಿಳಾಸಕ್ಕೆ ಕಳುಹಿಸಬೇಕು. ಅರ್ಜಿ ಪಡೆಯಲು, ಹೆಚ್ಚಿನ ಮಾಹಿತಿ ಪಡೆಯಲು ಅಥವಾ ಪ್ರವೇಶಕ್ಕೆ ಸಂಬಂಧಿಸಿದಂತೆ ಏನೇ ಸ್ಪಷ್ಟನೆಗಳು ಅಗತ್ಯವಿದ್ದಲ್ಲಿ ಪೋಷಕರು ಅಥವಾ ಪಾಲಕರು ನೇರವಾಗಿ ಶಾಲಾ ಕಛೇರಿಯಲ್ಲಿ ಸಂಪರ್ಕಿಸಲು ಕೋರಿದೆ. ಯಾವುದೇ ಮಧ್ಯವರ್ತಿಗಳನ್ನು ಅವಲಂಬಿಸಬಾರದು.

ಹೆಚ್ಚಿನ ಮಾಹಿತಿಗಾಗಿ 7411486938 (WhatsApp No), ಹಿರಿಯ ಪ್ರಾಥಮಿಕ ಶಾಲೆ 08221-232054, ಪ್ರೌಢಶಾಲೆ 08221-232653, ಬಸವೇಶ್ವರ ವಿದ್ಯಾರ್ಥಿನಿಲಯ 08221-232332, ಸಂಯೋಜನಾಧಿಕಾರಿಗಳ ಕಛೇರಿ 08221-232217 ಈ ದೂರವಾಣಿಗಳಲ್ಲಿ ಸಂಪರ್ಕಿಸಿ ವಿವರ ಪಡೆಯಬಹುದಾಗಿದೆ.

## ಕ್ಯಾಂಪಸ್ ಸಂದರ್ಶನದಲ್ಲಿ ಆಯ್ಕೆ

**ಮೈಸೂರು ಜೆಎಸ್‌ಎಸ್ ವಿಶೇಷಚೇತನರ ಪಾಲಿಟೆಕ್ನಿಕ್** ಡಿಪ್ಲೊಮ ಹಂತದಲ್ಲಿ ವಿಶೇಷಚೇತನರಿಗೆ ಶಿಕ್ಷಣ ನೀಡುತ್ತಿದ್ದು ಮತ್ತು ಉದ್ಯೋಗಕ್ಕೆ ಅವಕಾಶ ಕಲ್ಪಿಸುತ್ತಿದೆ. ತರಬೇತಿ ಮತ್ತು ಉದ್ಯೋಗ ಕೋಶವು ಮೂಲಭೂತ ಸೌಲಭ್ಯಗಳನ್ನು ಹೊಂದಿದ್ದು ವಿದ್ಯಾರ್ಥಿಗಳ ಸರ್ವೋತ್ತಮ ಬೆಳವಣಿಗೆಗೆ ಗರಿಷ್ಠ ಮಟ್ಟದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಈ ಕೋಶವು ವಿದ್ಯಾರ್ಥಿಗಳಿಗೆ ಕೌಶಲ್ಯ ಹಾಗೂ ನೈಪುಣ್ಯಾಧಾರಿತ ತರಬೇತಿಗಳನ್ನು ನೀಡುತ್ತಿದೆ. ಪ್ರತಿ ವಿದ್ಯಾರ್ಥಿಯು ತನ್ನದೇ ಆದ ರೀತಿಯಲ್ಲಿ ಪ್ರಗತಿ ಪಡೆಯಲು ಇದು ಸಹಕಾರ ನೀಡುತ್ತಿದೆ. ಮೆ. ಟಿವಿಎಸ್ ಮೋಟಾರ್ಸ್ ಕಂಪನಿ ಪ್ರೈವೇಟ್ ಲಿಮಿಟೆಡ್, ಮೈಸೂರುರವರು ದಿನಾಂಕ 13.2.2023ರಂದು ಪಾಲಿಟೆಕ್ನಿಕ್‌ನಲ್ಲಿ ಉದ್ಯೋಗ ಸಂಬಂಧ ಕ್ಯಾಂಪಸ್ ಸಂದರ್ಶನ ನಡೆಸಿದ್ದು 24 ಜನರು ತರಬೇತಿಗೆ ಆಯ್ಕೆಯಾಗಿರುತ್ತಾರೆ. ಈ ಸಂಸ್ಥೆಯು ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಅವರ ಯಶಸ್ವಿ ಜೀವನಕ್ಕಾಗಿ ತರಬೇತಿ ಮತ್ತು ಉದ್ಯೋಗ ಕೋಶದ ಮೂಲಕ ಅವರಿಗೆ ನೆರವು ನೀಡುತ್ತಿದೆ. ಕಡೆಪ್ಪ ತಿರುಮಲ ರಾಜು, ಟಿ. ಆರ್. ಕಿರಣ್, ವಿನೋದ್ ಕುಮಾರ್, ಕಟ್ರೇಕರ್ ಅರ್ಜುನ್, ಷರಬಲಿಂಗ, ಎನ್. ಸಂತೋಷ್, ಎನ್. ನಯನ್ ಕುಮಾರ್, ಶ್ರೀ ಕೆ. ಕೃಷ್ಣ, ಚಿತ್ತರಂಜನ ಕುಮಾರ್, ಸಾನೆ ನಾಮದೇವ್ ಲಕ್ಷಣ್, ಪಿ. ಅಜಯ್, ಶಿವರಾಜ್ ಎಸ್. ಕೆಂಗೋಡ್, ಸ್ನೇಹ, ಕಾವೇರಿ, ಗಗನ, ಸುಷ್ಮಾ, ಡಿ.ಎಂ. ಅಂಬಿಕೆ, ಬಿ. ಭಾರ್ಗವಿ, ಎಂ. ಹರ್ಷಿತಾ, ಹೆಚ್.ಬಿ. ಪ್ರಿಯಾ, ಸಿ. ಸ್ನೇಹ, ನಿಖಿತ, ಸುನಿತ ಮತ್ತು ಯೋಗೇಶ್ವರಿ ಆಯ್ಕೆಯಾದ ವಿದ್ಯಾರ್ಥಿಗಳು. ಈ ಅಭ್ಯರ್ಥಿಗಳನ್ನು ಪ್ರಾಂಶುಪಾಲರು ಮತ್ತು ಸಿಬ್ಬಂದಿವರ್ಗದವರು ಅಭಿನಂದಿಸಿರುತ್ತಾರೆ.

## ಶ್ರೀ ಕೊತ್ತಲವಾಡಿ ಶಿವಕುಮಾರ್‌ರವರಿಗೆ ಅಭಿನಂದನೆ

ಚಾಮರಾಜನಗರ ತಾಲ್ಲೂಕು 7ನೆಯ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿದ್ದ ಶ್ರೀ ಕೊತ್ತಲವಾಡಿ ಶಿವಕುಮಾರ್‌ರವರ ಅಭಿನಂದನಾ ಸಮಾರಂಭವನ್ನು **ನಂಜನಗೂಡು ಜೆಎಸ್‌ಎಸ್ ಕಾಲೇಜಿನಲ್ಲಿ** ಹಮ್ಮಿಕೊಳ್ಳಲಾಗಿತ್ತು.

ಇಂಗ್ಲಿಷ್ ಪ್ರಾಧ್ಯಾಪಕರಾದ ಡಾ. ಸಿ.ಎಸ್. ಹೊನ್ನೇಗೌಡರವರು ಶ್ರೀ ಶಿವಕುಮಾರ್‌ರವರ ಕೃತಿಗಳನ್ನು ಕುರಿತು ಮಾತನಾಡಿದರು. ಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ಶ್ರೀ ಕೊತ್ತಲವಾಡಿ ಶಿವಕುಮಾರ್ ತಾವು ಹೇಗೆ ಸಾಹಿತ್ಯದ ಆಸಕ್ತಿಯನ್ನು ಬೆಳಸಿಕೊಂಡೆ ಎಂಬುದನ್ನು ತಿಳಿಸುತ್ತಾ ತಮ್ಮ ಸಾಹಿತ್ಯ ಕೃಷಿಗೆ ಪ್ರೋತ್ಸಾಹಿಸಿದವರನ್ನು ಸ್ಮರಿಸಿಕೊಂಡರು.

ಇದೇ ಸಂದರ್ಭದಲ್ಲಿ ಕಾಲೇಜಿನ ಕಛೇರಿಗೆ ಅಧೀಕ್ಷಕರಾಗಿ ಆಗಮಿಸಿದಂತಹ ಶ್ರೀ ಕೆ.ವಿ. ಸುಂದರರಾಜುರವರನ್ನು ಆತ್ಮೀಯವಾಗಿ ಸ್ವಾಗತಿಲಾಯಿತು. ಡಾ. ಎ.ಎನ್. ಮಹದೇವಪ್ರಸಾದ್‌ರವರು ಅಧ್ಯಕ್ಷತೆ ವಹಿಸಿದ್ದರು. ಶ್ರೀ ಸುರೇಶ ಪ್ರಾರ್ಥನೆ ಸಲ್ಲಿಸಿದರು. ಶ್ರೀ ಗೂಳಪ್ಪಸ್ವಾಮಿ ಸ್ವಾಗತಿಸಿದರು. ಶ್ರೀಮತಿ ಬಿ. ರೂಪ ವಂದಿಸಿದರು. ಶ್ರೀ ಸ್ವಾಮಿ ಕಾರ್ಯಕ್ರಮ ನಿರೂಪಿಸಿದರು.

ಕರಿಯಂಜುವುದು ಅಂಕುಶಕ್ಕಯ್ಯಾ
ಗಿರಿಯಂಜುವುದು ಕುಲಿಶಕ್ಕಯ್ಯಾ
ತಮಂಧವಂಜುವುದು ಜ್ಯೋತಿಗಯ್ಯಾ
ಕಾನನವಂಜುವುದು ಬೇಗೆಗಯ್ಯಾ
ಪಂಚಮಹಾಪಾತಕವಂಜುವುದು
ಕೂಡಲಸಂಗನ ನಾಮಕ್ಕಯ್ಯಾ

**ಬಸವಣ್ಣ**

# ತೆಂಗು ಬೆಳೆಯ ಕ್ಷೇತ್ರೋತ್ಸವ



**ಸುತ್ತೂರು ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರ** ಹಾಗೂ ಬೆಂಗಳೂರು ತೆಂಗು ಅಭಿವೃದ್ಧಿ ಮಂಡಳಿ ಸಹಯೋಗದೊಂದಿಗೆ ತೆಂಗು ಬೆಳೆಯ ಕ್ಷೇತ್ರೋತ್ಸವವನ್ನು ಮೈಸೂರು ತಾಲೂಕಿನ ಆಯರಹಳ್ಳಿ ಪ್ರಗತಿಪರ ರೈತರಾದ ಶ್ರೀಮತಿ ಪ್ರಭಾಮಣಿಯವರ ತೆಂಗಿನ ತೋಟದಲ್ಲಿ ಆಯೋಜಿಸಲಾಗಿತ್ತು.

ಮೈಸೂರು ಜಿಲ್ಲೆಯ ಜಂಟಿ ತೋಟಗಾರಿಕಾ ನಿರ್ದೇಶಕರಾದ ಡಾ. ನಾಗರಾಜ್‌ರವರು ಮಾತನಾಡಿ ತೆಂಗು ಬೆಳೆಯ ಪ್ರಾಮುಖ್ಯತೆ, ತೆಂಗಿನ ಬೆಳೆಯಲ್ಲಿ ಅಂತರ ಬೆಳೆ ಪದ್ಧತಿಗಳು, ತೋಟಗಾರಿಕೆ ಇಲಾಖೆಯಿಂದ ತೆಂಗಿನ ಬೆಳೆಗೆ ಸಿಗುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಕೃಷಿ ವಿಜ್ಞಾನ ಕೇಂದ್ರದ ಮಣ್ಣು ವಿಜ್ಞಾನಿಯಾದ ರಜನ್ನಾನವರು ಮಾತನಾಡಿ ತೆಂಗಿನ ಬೆಳೆಯಲ್ಲಿ ಪೋಷಕಾಂಶಗಳ ನಿರ್ವಹಣೆ ಮತ್ತು ಮಣ್ಣಿನ ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆ ವಿವರಿಸಿದರು.

